ಸಂಪುಟ : 10 ಸಂಚಿಕೆ: 131 ಪುಟ : 4+2 ಬೆಲೆ: 3.00 ಗುರುವಾರ ಜೂನ್ 26 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 131 Pages : 4+2 Price : 3.00 Thursday June 26 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಎಲ್ಲ ವಾರ್ಡ್ ಗಳಿಗೆ ಕೇಂದ್ರ ಸರ್ಕಾರದ ಪ್ರದಾನ ಮಂತ್ರಿ ಆವಾಸ್ ( ನಗರ ) 2.0 ಯೋಜನೆಯಡಿ ವಸತಿ ರಹಿತ ( ಕಚ್ಚಾ ಮನೆ ಹೊಂದಿರುವ ) ಮತ್ತು ನಿವೇಶನ ರಹಿತ ಕುಟುಂಬಗಳಿಗೆ ವಸತಿ ಸೌಲಭ್ಯ ಕಲ್ಪಿಸಲು Unified web portal ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ವಸತಿ ಸೌಲಭ್ಯ ಪಡೆಯಲು http//pmay.urban.gov.in ದಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 15 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಗದಗ–ಬೆಟಗೇರಿ ನಗರಸಭೆ ವಸತಿ ವಿಭಾಗದ ಶಾಖೆಯಲ್ಲಿ ಸಂಪರ್ಕಿಸಬಹುದಾಗಿದೆ.

## ದರವಾರು ಪಟ್ಟಿಗಳ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ವಚ್ಛ ಭಾರತ ಮಿಷನ್–1.0 ಯೋಜನೆಯಡಿ ಅನುಮೋದಿತ ವಿಸ್ತೃತ ಯೋಜನಾ ವರದಿಯಲ್ಲಿ ಘನತ್ಯಾಜ್ಯ ವಸ್ತು ನಿರ್ವಹಣಾ ಘಟಕದಲ್ಲಿ ವಿವಿಧ ಅಲಂಕಾರಿಕ ಸಸಿ ನೆಡಲು ದರವಾರು ಪಟ್ಟಿಗಳ ಆಹ್ವಾನ ಮಾಡಲಾಗಿದೆ.

ಆಸಕ್ತರು ಪಟ್ಟಣ ಪಂಚಾಯತಿಗೆ ರೂ.500/– ಪ್ರತಿ ಅರ್ಜಿ ಫಾರ್ಮ್ ಫೀ ಪಡೆದು ದರವಾರು ಸಲ್ಲಿಸಲು ಅರ್ಜಿಯನ್ನು ನಮೂದಿಸಿ ಶಿಲ್‌ಬಂಧ ಲಕೋಟಿಯನ್ನು ಮುಖ್ಯಾಧಿಕಾರಿ ಪಟ್ಟಣ ಪಂಚಾಯತ್ ಮುಳಗುಂದ ಈ ವಿಳಾಸಕ್ಕೆ ಕಚೇರಿಯ ಅವಧಿಯಲ್ಲಿ ಜುಲೈ 4 ರೊಳಗಾಗಿ ಸಲ್ಲಿಸಬಹುದಾಗಿದೆ.

ದರವಾರು ಕುರಿತು ಹೆಚ್ಚಿನ ವಿವರಗಳಿಗೆ ಮುಳಗುಂದ ಪಟ್ಟಣ ಪಂಚಾಯತ್ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

IISc, IIT ಮತ್ತು NIT ಸಂಸ್ಥೆಗಳ ಮೂಲಕ Artificial intelligence and Machine Learning ವೃತ್ತಿಪರ ತರಬೇತಿ ಕೋರ್ಸ್‌ಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ವೃತ್ತಿಪರ ಇಂಜಿನಿಯರಿಂಗ್ ಪದವೀಧರರಿಗೆ ರೂ. 15,000/–ಗಳ ಶಿಷ್ಯವೇತನ / ತರಬೇತಿ ನೀಡುವ ಸಂಬಂಧ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 4 ಕೊನೆಯ ದಿನವಾಗಿದೆ.

ನಿಗದಿತ ಅರ್ಜಿ ನಮೂನೆಯನ್ನು ಹಾಗೂ ಹೆಚ್ಚಿನ ವಿವರಗಳಿಗಾಗಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರ ಕಚೇರಿ, ಮೊದಲನೇ ಮಹಡಿ ರೂಂ ನಂ. . 107, ಜಿಲ್ಲಾಡಳಿತ ಭವನ,ಹುಬ್ಬಳ್ಳಿ ರಸ್ತೆ, ಗದಗ – 582 101 ದೂರವಾಣಿ ಸಂಖ್ಯೆ 08372–231828 ಸಂಪರ್ಕಿಸಬಹುದಾಗಿದೆ.

### ಸಾಮಾನ್ಯ, ಕೆಡಿಪಿ ಸಭೆಯಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಸೂಚನೆ

# ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾರ್ವಜನಿಕರಿಂದ ದೂರುಗಳು ಬರದಂತೆ ಎಲ್ಲ ಇಲಾಖೆಯ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯ ನಿರ್ವಹಿಸಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಸೂಚಿಸಿದರು.

ಅವರು ಬುಧವಾರ ತಾಲೂಕಾ ಪಂಚಾಯಿತಿ ಸಭಾಭವನದಲ್ಲಿ ನಡೆದ ಸಾಮಾನ್ಯ ಮತ್ತು ಕೆಡಿಪಿ ಸಭೆಯಲ್ಲಿ ಮಾತನಾಡಿದರು.

ಅಧಿಕಾರಿಗಳು ತಮ್ಮ ಇಲಾಖೆಯ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸದಿದ್ದರೆ ಅದಕ್ಕೆ ಜನಪ್ರತಿನಿಧಿಗಳು ಉತ್ತರ ಕೊಡಬೇಕಾಗುತ್ತದೆ. ಅರಣ್ಯ ಇಲಾಖೆಯ ಅಧಿಕಾರಿಗಳು ಪ್ರತಿ ವರ್ಷ ಮಳೆಗಾಲದಲ್ಲಿ ನೆಟ್ಟ ಸಸಿಗಳು ಕನಿಷ್ಠ ಅರ್ಧದಷ್ಟಾದರೂ ರಕ್ಷಣೆಯಾಗಿ ಬೆಳೆಯಬೇಕು. ಇಲ್ಲದಿದ್ದರೆ ಸರ್ಕಾರದ ಹಣವೂ ಪೋಲು, ಉದ್ದೇಶವೂ ಸಾಕಾರಗೊಳ್ಳುವುದಿಲ್ಲ. ತಾಲೂಕಿನ ಸಂರಕ್ಷಿತ ಅರಣ್ಯ ಪ್ರದೇಶದಲ್ಲಿರುವ ಅನಧಿಕೃತ ಕ್ರಷರ್‌ಗಳು ಬಂದ್ ಆಗಿದ್ದರೂ ತೆರೆಮರೆಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಈ ಬಗ್ಗೆ ನಿಗಾ ವಹಿಸಬೇಕು ಎಂದು ಆರ್‌ಎಫ್‌ಓ ಮೇಘನಾ ಹೆಚ್ ಅವರಿಗೆ ಸೂಚಿಸಿದರು.




ಲಕ್ಷ್ಮೇಶ್ವರದಲ್ಲಿ ಕಳೆದ 3 ವರ್ಷಗಳಿಂದ ಕೆಆರ್‌ಐಡಿಎಲ್‌ನಿಂದ ನಿರ್ಮಾಣಗೊಳ್ಳುತ್ತಿರುವ ಮೌಲಾನಾ ಆಜಾದ್ ಶಾಲೆಯ ಕಟ್ಟಡ ಇಲಾಖೆಯ ಅಧಿಕಾರಿಗಳ ನಿರ್ಲಕ್ಷದಿಂದ ಸಂಪೂರ್ಣ ಕಳಪೆಯಾಗಿದೆ. ಈ ಬಗ್ಗೆ ಪಿಡಬ್ಲ್ಯೂಡಿ ಸೇರಿ ತನಿಖಾ ಸಮಿತಿಯಿಂದ ಪರಿಶೀಲಿಸಾನಾ ವರದಿ ಪಡೆದು ಕ್ರಮ ಕೈಗೊಳ್ಳಬೇಕು ಎಂದರು. ತಾಲೂಕಿನಲ್ಲಿ ಅರ್ಧಕ್ಕೆ ನಿಂತ ಅಂಗನವಾಡಿ ಕಟ್ಟಡ ಕಾಮಗಾರಿಗಳು ಪೂರ್ಣಗೊಳ್ಳಬೇಕು. ಬಾಡಿಗೆ ಕಟ್ಟಡದಲ್ಲಿ ನಡೆಯುವ ಅಂಗನವಾಡಿಗೆ ಸ್ಥಳಾವಕಾಶ ಪಡೆದು ನರೇಗಾ ಮತ್ತು ಇಲಾಖೆಯ ಅನುದಾನದಿಂದ ಸ್ವಂತ ಕಟ್ಟಡ ನಿರ್ಮಾಣಗೊಳ್ಳಬೇಕು. ಅರ್ಧಕ್ಕೆ ನಿಂತ ಹಾಸ್ಟೆಲ್ ಕಟ್ಟಡ ಕಾಮಗಾರಿ ಪೂರ್ಣಗೊಳ್ಳಬೇಕು. ತಾಲೂಕಿನ ಕಟ್ಟ ಕಡೆಯ ಹಳ್ಳಿಗಳಲ್ಲಿಯೂ ನ್ಯಾಯಬೆಲೆ ಅಂಗಡಿ ಪ್ರಾರಂಭಗೊಳ್ಳುವಂತಾಗಬೇಕು. ಕಾರ್ಮಿಕ ಇಲಾಖೆಯಲ್ಲಿ ಫೇಕ್ ಕಾರ್ಡ್ ತಡೆಯಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಶಾಲೆಗಳಲ್ಲಿ ಮೊಟ್ಟೆ ವಿತರಣೆ ಸಮರ್ಪಕವಾಗಿ ನಡೆಯುತ್ತಿಲ್ಲ ಎಂಬ ದೂರುಗಳು ಬರುತ್ತಿವೆ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿ, 1 ಮೊಟ್ಟೆ ಖರೀದಿಗೆ ಸರ್ಕಾರ 5 ರೂ ಕೊಡುತ್ತದೆ. ಆದರೆ ಸದ್ಯ ಮೊಟ್ಟೆ ದರ 6 ರೂಗಿಂತ ಹೆಚ್ಚಿದೆ. ಆದಾಗ್ಯೂ ಸಮಸ್ಯೆಯಾಗದಂತೆ ನಿರ್ವಹಣೆ ಮಾಡಲಾಗುತ್ತಿದೆ ಎಂದು ಹೇಳಿದಾಗ ತಾ.ಪಂ ಆಡಳಿತಾಧಿಕಾರಿ ಈ ಬಗ್ಗೆ ವರದಿ ಸಲ್ಲಿಸಲಾಗುವುದೆಂದರು.

ಸಭೆಯ ಅಧ್ಯಕ್ಷತೆಯನ್ನು ಆಡಳಿತಾಧಿಕಾರಿ ಎಂ.ವಿ. ಚಳಗೇರಿ ವಹಿಸಿದ್ದರು. ಸಭೆಯಲ್ಲಿ ಕೃಷಿ ಇಲಾಖೆಯ ಅಧಿಕಾರಿ ರೇವಣಪ್ಪ ಮನಗೂಳಿ, ಪಿಡಬ್ಲುಡಿ ಎಫ್.ಎಚ್. ತಿಮ್ಮಾಪುರ, ಬಿಇಓ ನಾಣಕಿ ನಾಯ್ಕ, ಹೆಸ್ಕಾಂನ ಆಂಜನಪ್ಪ ಬಿ, ಟಿಎಚ್‌ಓ ಸುಭಾಷ ಡಿ, ಸಿಡಿಪಿಓ ಮೃತ್ಯುಂಜಯ ಗುಡ್ಡದನ್ವೇರಿ, ಆಹಾರ ಇಲಾಖೆ ಜಗದೀಶ ಕುರುಬರ ಸೇರಿ ವಿವಿಧ ಇಲಾಖೆಗಳ ಅಧಿಕಾರಿಗಳು ಪಾಲ್ಗೊಂಡಿದ್ದರು. ತಾಪಂ ಇಓ ಕೃಷ್ಣಪ್ಪ ಧರ್ಮರ ನಿರ್ವಹಿಸಿದರು.

**ಶಾಸಕರ ಅನುದಾನ ಕನ್ನಡಿಯೊಳಗಿನ ಗಂಟು!**

ಸಭೆಯಲ್ಲಿ ಬಿಸಿಎಂ ಇಲಾಖೆಯ ಅಧಿಕಾರಿ ಹಾಸ್ಟೆಲ್ ಕಟ್ಟಡ ದುರಸ್ತಿಗೆ ಶಾಸಕರ ಅನುದಾನ ಒದಗಿಸಿ ಎಂದಾಗ ಪ್ರತಿ ತಾಲೂಕಿಗೆ 2 ಕೋಟಿ ರೂ ಶಾಸಕರ ಪ್ರದೇಶಾಭಿವೃದ್ಧಿ ಅನುದಾನವನ್ನೇನೋ ಸರ್ಕಾರ ಮೀಸಲಿರಿಸುತ್ತದೆ. ಆದರೆ ಅನುದಾನ ಬಳಕೆಗೆ ಜಿಲ್ಲಾಧಿಕಾರಿಗಳಿಗೆ ಕ್ರಿಯಾಯೋಜನೆ ಸಲ್ಲಿಸಿದರೆ ಹತ್ತಾರು ಮಾರ್ಗಸೂಚಿಗಳು ಹಣ ಬಿಡುಗಡೆಗೆ ಅಡ್ಡಿಯಾಗುತ್ತವೆ. ಅನುದಾನ ಬಳಕೆಗೆ ಪ್ರಸ್ತಾವನೆ ಸಲ್ಲಿಸಿದರೂ ಬಿಡುಗಡೆಗೆ ವರ್ಷಗಳೇ ಕಾಯಬೇಕು. ಒಟ್ಟಿನಲ್ಲಿ ಶಾಸಕರ ಅನುದಾನ ಹೆಸರಿಗೆ ಮಾತ್ರ ಎನ್ನುವಂತೆ ಕನ್ನಡಿಯೊಳಗಿನ ಗಂಟಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ತಮ್ಮ ಅಸಮಾಧಾನ ವ್ಯಕ್ತಪಡಿಸಿದರು.

### ಪತ್ರಿಕಾಗೋಷ್ಠಿಯಲ್ಲಿ ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಆರೋಪ

# ಪತ್ರದ ಹಿಂದೆ ರಾಜಕೀಯ ಉದ್ದೇಶ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಚರ್ಚೆ ಜೋರಾಗಿದೆ. ಡಿ.ಕೆ. ಶಿವಕುಮಾರ ಮುಖ್ಯಮಂತ್ರಿಯಾದರೆ ಅವರ ಸಚಿವ ಸಂಪುಟದಲ್ಲಿಯೂ ಮಂತ್ರಿ ಸ್ಥಾನ ಭದ್ರಪಡಿಸಿಕೊಳ್ಳಬೇಕು ಎನ್ನುವ ಉದ್ದೇಶದಿಂದ ಎಚ್.ಕೆ. ಪಾಟೀಲರು ಪತ್ರ ರಾಜಕಾರಣ ಮಾಡುತ್ತಿದ್ದಾರೆ ಎಂದು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಗಂಭೀರ ಆರೋಪ ಮಾಡಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಕ್ರಮ ಗಣಿಗಾರಿಕೆ ವಿಚಾರವಾಗಿ ಸಚಿವ ಎಚ್.ಕೆ. ಪಾಟೀಲರು ಮುಖ್ಯಮಂತ್ರಿಗಳಿಗೆ ಬರೆದ ಪತ್ರದ ವಿಚಾರವಾಗಿ ಕುಮಾರಸ್ವಾಮಿ ಎತ್ತಿರುವ ಪ್ರಶ್ನೆಗಳಿಗೆ ಉತ್ತರಿಸಿಲ್ಲ.

ಪತ್ರ ಬರೆದ ಉದ್ದೇಶವನ್ನೂ ಸ್ಪಷ್ಟಪಡಿಸಿಲ್ಲ. ಎಚ್.ಕೆ. ಪಾಟೀಲರಿಗೆ ಅಕ್ರಮ ಗಣಿಗಾರಿಕೆ ಬಗ್ಗೆ ನೈಜ ಕಳಕಳಿ ಇದ್ದಿದ್ದರೆ, ಅಧಿಕಾರಕ್ಕೆ ಬಂದ ತಕ್ಷಣವೇ ಕ್ರಮ ಕೈಗೊಳ್ಳಬಹುದಿತ್ತು. ಆದರೆ ಮುಖ್ಯಮಂತ್ರಿ ಬದಲಾವಣೆ ಸಂದರ್ಭದಲ್ಲೇ ಈ ಪತ್ರ ಬರೆದಿರುವುದರ ಹಿಂದೆ ರಾಜಕೀಯ ಉದ್ದೇಶ ಅಡಗಿರುವುದು ಸ್ಪಷ್ಟವಾಗಿದೆ ಎಂದು ಹೇಳಿದರು.




ಕಾನೂನು ಸಚಿವರ ತವರು ಜಿಲ್ಲೆಯ ಅನೇಕ ಭ್ರಷ್ಟ ಅಧಿಕಾರಿಗಳು ಲೋಕಾಯುಕ್ತರ ಬಲೆಗೆ ಬಿದ್ದಿದ್ದಾರೆ. ಗದಗ ಮತಕ್ಷೇತ್ರದ ಜನರ ಹಣ ಸುಲಿಗೆ ಮಾಡಿದ ಅಧಿಕಾರಿಗಳನ್ನು ಮೊದಲು ವರ್ಗಾವಣೆ ಮಾಡಿ. ಆ ಮೇಲೆ ಗಣಿ ಅಕ್ರಮದಿಂದ ರಾಜ್ಯಕ್ಕೆ ಬರಬೇಕಾದ ಹಣ ವಾಪಸ್ ತರುವ ಪ್ರಯತ್ನ ಮಾಡಿ ಎಂದು ಗೋವಿಂದಗೌಡ್ರ ಸಲಹೆ ನೀಡಿದರು.

ಧಾರ್ಮಿಕ ಮನೋಭಾವ ಹೊಂದಿರುವ ಕುಮಾರಸ್ವಾಮಿ ಅವರು, ಸಂದರ್ಭಕ್ಕೆ ಅನುಸಾರವಾಗಿ ರಾವಣ, ಕುಂಭಕರ್ಣ, ರಾಮಾಯಣ ಉಲ್ಲೇಖಿಸಿದ್ದಾರೆ. ದೇವರ, ಧರ್ಮದ ಬಗ್ಗೆ ಅಪಾರ ಶ್ರದ್ಧೆ ಹೊಂದಿದ ಕುಮಾರಸ್ವಾಮಿ, ಈವರೆಗೆ ಯಾವುದೇ ದೇವಸ್ಥಾನದ ಗೋಡೆ ಒಡೆದಿಲ್ಲ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು ಎಂದು ವಾಗ್ದಾಳಿ ನಡೆಸಿದರು. ಸುದ್ದಿಗೋಷ್ಠಿಯಲ್ಲಿ ಎಂ.ಎಸ್. ಪರ್ವತಗೌಡ್ರ, ಬಸವರಾಜ ಅಪ್ಪಣ್ಣವರ, ರಮೇಶ ಹುಣಸಿಮರದ, ಸಂತೋಷ ಪಾಟೀಲ, ಅಭಿಷೇಕ ಕಂಬಳಿ, ಪ್ರಫುಲ್ ಪುಣೇಕರ್, ಹರೀಶ ಹಡಗಲಿಮಠ ಉಪಸ್ಥಿತರಿದ್ದರು.

> ಕಾಂಗ್ರೆಸ್ ಪ್ರಜಾಪ್ರಭುತ್ವದ ಕಗ್ಗೊಲೆ ನಡೆಸಿ ಇಂದಿಗೆ 50 ವರ್ಷಗಳಾಗಿವೆ. ತುರ್ತು ಪರಿಸ್ಥಿತಿಯ ಮೂಲಕ ಸರ್ವಾಧಿಕಾರಿ ಆಡಳಿತ ನಡೆಸಿದರು. ಆದರೂ ಕಾಂಗ್ರೆಸ್ ಆ ಬಗ್ಗೆ ವಿಷಾದ ವ್ಯಕ್ತಪಡಿಸಿಲ್ಲ. ದೇಶದ ಜನರ ಕ್ಷಮೆ ಕೇಳಿಲ್ಲ. ಇಷ್ಟಾಗಿಯೂ ಕಾಂಗ್ರೆಸ್ಸಿಗರು ಸಂವಿಧಾನ ರಕ್ಷಕರು ಎಂದು ಹೇಳಿಕೊಳ್ಳುತ್ತಿರುವುದು ಹಾಸ್ಯಾಸ್ಪದವಾಗಿದೆ.
>
> **– ವೆಂಕನಗೌಡ ಗೋವಿಂದಗೌಡ್ರ.**
> ಜೆಡಿಎಸ್ ರಾಜ್ಯ ವಕ್ತಾರರು.

### ತಹಸೀಲ್ದಾರರಿಂದ ಮಣ್ಣು ಅಕ್ರಮ ಸಾಗಾಣಿಕೆದಾರರ ರಕ್ಷಣೆ: ಕರವೇ ಆರೋಪ

## ಅಕ್ರಮ ನಡೆಯುತ್ತಿದ್ದರೂ ಕ್ರಮವಿಲ್ಲ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನಾದ್ಯಂತ ಮಣ್ಣು ಅಕ್ರಮ ಗಣಿಗಾರಿಕೆ/ಸಾಗಾಣಿಕೆ ಅವ್ಯಾಹತವಾಗಿ ನಡೆಯುತ್ತಿದ್ದು, ಇದಕ್ಕೆ ತಾಲೂಕಿನ ತಹಸೀಲ್ದಾರರ ಸಹಕಾರವೇ ಕಾರಣವಾಗಿದೆ. ಈ ಬಗ್ಗೆ ಜಿಲ್ಲಾಧಿಕಾರಿಗಳು ಕೂಲಂಕುಷವಾಗಿ ಮಾಹಿತಿ ಪಡೆದು, ವಿಚಾರಣೆ ಮಾಡಿ ಅವರ ಮೇಲೆ ಕ್ರಮ ಜರುಗಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ಜಿಲ್ಲಾಧ್ಯಕ್ಷ ಶರಣು ಗೋಡಿ ಆಗ್ರಹಿಸಿದರು.

ಈ ಕುರಿತು ಬುಧವಾರ ಪಟ್ಟಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನ ಸೂರಣಗಿ ಗ್ರಾಮದ ಸರ್ವೆ ನಂ.326ರ ಪಟ್ಟಾ ಭೂಮಿಯಲ್ಲಿ ಯಾವುದೇ ಅನುಮತಿ ಇಲ್ಲದೇ ಹಿಟಾಚಿ ಮತ್ತು ಹಲವು ಟಿಪ್ಪರ್‌ಗಳ ಮೂಲಕ ಹಗಲಿನಲ್ಲಿಯೇ ರಾಜಾರೋಷವಾಗಿ ಮಣ್ಣು ಸಾಗಾಣಿಕೆ ಮಾಡಲಾಗುತ್ತಿದೆ. ಈ ಬಗ್ಗೆ ತಹಸೀಲ್ದಾರರಿಗೆ ನೇರ ದೃಶ್ಯಾವಳಿ ಮೂಲಕ ತಿಳಿಸಿದರೂ ಯಾವುದೇ ಕ್ರಮವಾಗಿಲ್ಲ ಎಂದರು.

ಜಿಲ್ಲಾ ಉಪವಿಭಾಗಾಧಿಕಾರಿಗಳಿಗೆ, ಭೂ–ಗಣಿ ವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದರೂ ತಡೆಯುವ ಕ್ರಮವಾಗಿಲ್ಲ. ತಹಸೀಲ್ದಾರ

▶▶3ನೇ ಪುಟಕ್ಕೆ

> ಮೇಲ್ನೋಟಕ್ಕೆಂಬಂತೆ ಕೆಲ ಬಾರಿ ರೈತರು ರಸ್ತೆ ಮತ್ತು ಸ್ವಂತಕ್ಕೆ ಒಂದೆರಡು ಟ್ರ್ಯಾಕ್ಟರ್ ಮೊರಂ/ ಗೊರಸು ಹೇರಿದರೆ ಅವರ ಮೇಲೆ ಕೇಸ್ ಹಾಕುತ್ತಾರೆ. ದೊಡ್ಡ ಪ್ರಮಾಣದ ಅಕ್ರಮ ನಡೆದರೂ ಕ್ರಮ ತೆಗೆದುಕೊಳ್ಳುತ್ತಿಲ್ಲ. ಕೂಡಲೇ ಜಿಲ್ಲಾಧಿಕಾರಿಗಳು ಈ ಬಗ್ಗೆ ವಿಶೇಷ ಗಮನ ಹರಿಸಿ ತಹಸೀಲ್ದಾರರ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕೆಂದು ಶರಣು ಗೋಡಿ ಆಗ್ರಹಿಸಿದರು.

## ನಾಳೆ ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಜುಲೈ 2 ರಂದು ಆಚರಿಸಲಾಗುವ ಡಾ.ಫ.ಗು.ಹಳಕಟ್ಟಿಯವರ ಜನ್ಮದಿನ–ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ನಿಮಿತ್ತ ಜೂನ್ 27 ರ ಶುಕ್ರವಾರ 4 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಡಪದ ಅಪ್ಪಣ್ಣವರ ಜಯಂತಿ ಹಿನ್ನೆಲೆ; ನಾಳೆ ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಜುಲೈ 10ರಂದು ಆಚರಿಸಲಾಗುವ ಹಡಪದ ಅಪ್ಪಣ್ಣನವರ ಜಯಂತಿ ನಿಮಿತ್ತ ಜೂನ್ 27 ರಂದು ಶುಕ್ರವಾರ ಸಂಜೆ 5 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾದಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರೋಣ ಪುರಸಭೆ ವ್ಯಾಪ್ತಿಯಲ್ಲಿ ಪ್ರಧಾನ ಮಂತ್ರಿ ಆವಾಸ್ ( ನಗರ ) 2.0 ಯೋಜನೆಯಡಿ ವಸತಿ ರಹಿತ ( ಕಚ್ಚಾ ಮನೆ ಹೊಂದಿರುವ ) ಮತ್ತು ನಿವೇಶನ ರಹಿತ ಕುಟುಂಬಗಳಿಗೆ ವಸತಿ ಸೌಲಭ್ಯ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನ ಜುಲೈ 15 ಆಗಿದ್ದು, ಹೆಚ್ಚಿನ ಮಾಹಿತಿಗಾಗಿ ರೋಣ ಪುರಸಭೆ ಕಾರ್ಯಾಲಯದ ಆಶ್ರಯ ವಿಭಾಗದಲ್ಲಿ ಸಂಪರ್ಕಿಸಬಹುದಾಗಿದೆ.

## ಮಣ್ಣೆತ್ತಿನ ಮೂರ್ತಿಗಳ ಮಾರಾಟ ಜೋರು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಣ್ಣೆತ್ತಿನ ಅಮವಾಸ್ಯೆ ಹಬ್ಬದ ಆಚರಣೆಗಾಗಿ ಬುಧವಾರ ಪಟ್ಟಣದಲ್ಲಿ ಮಣ್ಣೆತ್ತಿನ ಮೂರ್ತಿಗಳ ಮಾರಾಟದ ಭರಾಟೆ ಜೋರಾಗಿಯೇ ನಡೆಯಿತು. ಬೆಳಿಗ್ಗೆಯಿಂದಲೇ ಮೂರ್ತಿ ತಯಾರಕರು ಪಟ್ಟಣದ ಪೇಟೆ ಹನಮಂತ ದೇವಸ್ಥಾನದ ಪ್ರಾಂಗಣದಲ್ಲಿ ಸುಂದರ ಮಣ್ಣೆತ್ತಿನ ಮೂರ್ತಿಗಳ ಮಾರಾಟಕ್ಕೆ ಅಣಿಯಾಗಿದ್ದರು. ಮೂರ್ತಿಗಳ ಖರೀದಿಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದರಿಂದ ಅಲ್ಲಿ ಎತ್ತಿನ ಪರಸಿ(ಜಾತ್ರೆ)ಯೇ ಉಂಟಾಗಿತ್ತು.

ಲಕ್ಷ್ಮೇಶ್ವರ ಪಟ್ಟಣದಲ್ಲಿನ ಹತ್ತಾರು ಕುಂಬಾರರ ಮನೆತನಗಳಿಂದ 20 ಸಾವಿರಕ್ಕೂ ಹೆಚ್ಚಿನ ಮೂರ್ತಿಗಳು ಸಿದ್ಧವಾಗುತ್ತವೆಯಾದರೂ ಇಲ್ಲಿನ ಮೂರ್ತಿಗಳಿಗೆ ಬೇಡಿಕೆ ಹೆಚ್ಚುತ್ತಿದೆ. ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಹಾವೇರಿ, ಕೊಪ್ಪಳ, ಬೆಳಗಾವಿ ಅನೇಕ ಜಿಲ್ಲೆಗಳಿಗೆ ಹಬ್ಬದ ಮುನ್ನಾದಿನ ಹೋಲ್‌ಸೇಲ್ ದರದಲ್ಲಿ ಮಾರಾಟವಾದ ಕಾರಣ ಸ್ಥಳೀಯವಾಗಿ ಎತ್ತಿನ ಮೂರ್ತಿಗಳ ಸಂಖ್ಯೆ ಕಡಿಮೆಯಾಗಿದೆ. ಈ ಕಾರಣದಿಂದ ಬೆಲೆಯಲ್ಲೂ ಹೆಚ್ಚಳವಾಗಿದ್ದು ಕಂಡು ಬಂದಿತು.

20 ರೂಗಳಿಗೆ ಮಾರುತ್ತಿದ್ದ ಅತೀ ಚಿಕ್ಕ ಮೂರ್ತಿಗಳೂ 50 ರೂ ಮೇಲ್ಪಟ್ಟು ಮಾರಾಟವಾದವು. ಬಣ್ಣದ ಬದಲಾಗಿ ಈ ವರ್ಷ ಪರಿಸರ ಸ್ನೇಹಿ ಮೂರ್ತಿಗಳಿಗೂ ಬೇಡಿಕೆಯಿತ್ತು. ಕೆಲವು ವಿಶೇಷ ಅಲಂಕಾರದ ಮಣ್ಣಿನ ದೊಡ್ಡ ಗಾತ್ರದ ಎತ್ತುಗಳು 2000 ರೂವರೆಗೂ ಮಾರಾಟವಾದವು. ರೈತರಷ್ಟೇ ಅಲ್ಲದೇ ಪ್ರತಿ ಮನೆಯಲ್ಲೂ ಎತ್ತಿನ ಮೂರ್ತಿಗಳಿಗೆ ವಿಶೇಷ ಪೂಜೆ ಮಾಡಿ ಸಂಭ್ರಮದಿಂದ ಹಬ್ಬ ಆಚರಿಸಿದರು.

# ಧಾರಕಾರ ಮಳೆ ಹಿನ್ನೆಲೆ: ಇಂದು ಶಾಲೆಗಳಿಗೆ ರಜೆ!

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಧಾರಕಾರ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಹಾಸನ, ಚಿಕ್ಕಮಗಳೂರು ಹಾಗೂ ಉತ್ತರ ಕನ್ನಡ ಜಿಲ್ಲೆಯ ಶಾಲೆಗಳಿಗೆ ಗುರುವಾರ ರಜೆ ಘೋಷಿಸಿ ಆಯಾ ಜಿಲ್ಲಾಡಳಿತ ಆದೇಶ ಹೊರಡಿಸಿದೆ.

ಹಾಸನ ಜಿಲ್ಲೆಯ ಮೂರು ತಾಲೂಕುಗಳ ಅಂಗನವಾಡಿ, ಪ್ರಾಥಮಿಕ, ಪ್ರೌಢಶಾಲೆಗಳಿಗೆ ರಜೆ ಘೋಷಣೆ ಮಾಡಲಾಗಿದೆ.

ಸಕಲೇಶಪುರ, ಆಲೂರು, ಅರಕಲಗೂಡು ತಾಲ್ಲೂಕುಗಳ ಅಂಗನವಾಡಿ, ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ರಜೆ ಘೋಷಣೆ ಮಾಡಿ ಡಿಸಿ ಕೆ.ಎಸ್ ಲತಾಕುಮಾರಿ ಆದೇಶ ಹೊರಡಿಸಿದ್ದಾರೆ. ಇದರಲ್ಲಿ ಸಕಲೇಶಪುರ ತಾಲ್ಲೂಕಿನ, ಅಂಗನವಾಡಿ, ಪ್ರಾಥಮಿಕ, ಪ್ರೌಢಶಾಲೆಗಳಿಗೆ ಹಾಗೂ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ.

ಚಿಕ್ಕಮಗಳೂರು ಜಿಲ್ಲೆಯಲ್ಲೂ ರಜೆ ಘೋಷಣೆ ಮಾಡಲಾಗಿದೆ.

ಮೂಡಿಗೆರೆ, ಶೃಂಗೇರಿ, ಕೊಪ್ಪ, ಎನ್ ಆರ್ ಪುರ ಹಾಗೂ ಕಳಸ ತಾಲೂಕಿನ ಅಂಗನವಾಡಿ, ಪ್ರಾಥಮಿಕ ಹಾಗೂ ಪ್ರೌಢಶಾಲೆಗೆ ರಜೆ ಘೋಷಣೆ ಮಾಡಿ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಆದೇಶ ಹೊರಡಿಸಿದ್ದಾರೆ.

**ಉತ್ತರ ಕನ್ನಡದಲ್ಲೂ ಶಾಲೆಗಳಿಗೆ ರಜೆ:** ಮಳೆಯ ಆರ್ಭಟ ಜೋರಾದ ಹಿನ್ನೆಲೆಯಲ್ಲಿ ಉತ್ತರ ಕನ್ನಡ ಜಿಲ್ಲೆಯ ಎರಡು ತಾಲೂಕುಗಳ ಶಾಲೆ, ಅಂಗನವಾಡಿ ಕೇಂದ್ರಗಳಿಗೆ ರಜೆ ಘೋಷಣೆ ಮಾಡಲಾಗಿದೆ. ಜೋಯಿಡಾ, ದಾಂಡೇಲಿ ತಾಲೂಕಿನ ಶಾಲೆ, ಅಂಗನವಾಡಿ ಕೇಂದ್ರಗಳಿಗೆ ಜೂ. 26 ರಂದು ರಜೆ ಘೋಷಿಸಿ ಜಿಲ್ಲಾಧಿಕಾರಿ ಲಕ್ಷ್ಮಿಪ್ರಿಯಾ ಆದೇಶ ಹೊರಡಿಸಿದ್ದಾರೆ.

## ನನ್ನ ಮೂರು ಸೋಲುಗಳು ನನಗೆ ರಾಜಕೀಯವಾಗಿ ಪರಿಪಕ್ವತೆಯನ್ನು ಕಲಿಸಿವೆ: ನಿಖಿಲ್ ಕುಮಾರಸ್ವಾಮಿ

**■ವಿಜಯಸಾಕ್ಷಿ ಸುದ್ದಿ, ರಾಮನಗರ**



ನನ್ನ ಮೂರು ಸೋಲುಗಳು ನನಗೆ ರಾಜಕೀಯವಾಗಿ ಪರಿಪಕ್ವತೆಯನ್ನು ಕಲಿಸಿವೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದ್ದಾರೆ. ರಾಮನಗರದಲ್ಲಿ ಮಾತನಾಡಿದ ಅವರು, ನಾನು ಪಲಾಯನವಾದಿಯಲ್ಲ, ಯಾರೂ ಸಂದೇಹ ಇಟ್ಟುಕೊಳ್ಳಬೇಡಿ, ಸೋಲು ಗೆಲುವು ಸರ್ವೇಸಾಮಾನ್ಯ. ನನ್ನ ಮೂರು ಸೋಲುಗಳು ನನಗೆ ರಾಜಕೀಯವಾಗಿ ಪರಿಪಕ್ವತೆಯನ್ನು ಕಲಿಸಿವೆ ಎಂದು ಹೇಳಿದರು.


ಇನ್ನೂ ಕಾಂಗ್ರೆಸ್ ನಿಂದ ಒಂದು ಚರಂಡಿಯನ್ನೂ ಸರಿ ಮಾಡಲಾಗಿಲ್ಲ, ಶಾಲೆ ಸೋರುತ್ತಿದ್ದರೂ ಸರಿಪಡಿಸಲಾಗಿಲ್ಲ, ಶಾಸಕರಿಗೆ ಅನುದಾನ ಕೊಡಲಾಗಿಲ್ಲ. ಇಂತಹವರು ರಾಜ್ಯವನ್ನು ಅಭಿವೃದ್ಧಿಪಡಿಸುತ್ತಾರೆಯೇ? ಎಂದು ಕಾಂಗ್ರೆಸ್ ಸರ್ಕಾರದ ವೈಫಲ್ಯದ ಬಗ್ಗೆ ಕಿಡಿಕಾರಿದರು.

**ಪುಸ್ತಕ ವಿಮರ್ಶೆ**

### ಚುರುಕು ಮುಟ್ಟಿಸುವ ಚುಟುಕು ಸಂಕಲನ

# 'ಬೊಗಸೆಯೊಳಗಿನ ಚುಟುಕು ಸಾಗರ'

'ಚುಟುಕು ಸಾಹಿತ್ಯ-ಬದುಕಿಗೆ ಲಾಲಿತ್ಯ' ಇದು ಚುಟುಕು ಸಾಹಿತ್ಯ ಪರಿಷತ್ತಿನ ಧ್ಯೇಯ ವಾಕ್ಯ. ಚುಟುಕು ಬ್ರಹ್ಮ ದಿನಕರ ದೇಸಾಯಿ ಅವರ ಚುಟುಕುಗಳು ಯುವ ಪೀಳಿಗೆಯ ಬರಹಗಾರರಿಗೆ ದಾರಿದೀಪದಂತಿವೆ. ಅತಿ ಕಡಿಮೆ ಪದಗಳಲ್ಲಿ ಅತ್ಯಂತ ತೀಕ್ಷ್ಣವಾಗಿ ಮನಕ್ಕೆ ಮುಟ್ಟುವ ಹಾಗೆ ಬರೆಯುವುದು ಒಂದು ಸವಾಲಿನ ಕೆಲಸವೇ ಸರಿ. ಅಂತಹ ಸವಾಲನ್ನು ಸಮರ್ಥವಾಗಿ ಎದುರಿಸಿ ಸಾಹಿತ್ಯ ರಚಿಸುವವರ ಸಂಖ್ಯೆ ಹೆಚ್ಚಾಗುತ್ತಿರುವುದು ಸಂತಸದ ಸಂಗತಿ. ಇದಕ್ಕೆ ಪೂರಕವಾಗಿ ಮೈಸೂರಿನ ವಿ. ಸೀತಾಲಕ್ಷ್ಮೀ ವರ್ಮ ಅವರ ಚೊಚ್ಚಲ ಚುಟುಕು ಸಂಕಲನ 'ಬೊಗಸೆಯೊಳಗಿನ ಚುಟುಕು ಸಾಗರ' ಕೃತಿಯ ಅವಲೋಕನ ಮಾಡುವ ಸಣ್ಣ ಪ್ರಯತ್ನವೇ ಈ ಬರಹ.




ಕಿರಿದರಲ್ಲಿ ಹಿರಿದರ್ಥ ಹೊರಹೊಮ್ಮಿಸುವ ಈ ಸಂಕಲನದಲ್ಲಿ ಒಟ್ಟು 180 ಚುಟುಕುಗಳು ಮಿಳಿತಗೊಂಡಿವೆ. ಸಾಹಿತ್ಯದ ಬಗ್ಗೆ ಬಾಲ್ಯದಿಂದಲೇ ಒಲವನ್ನು ಮೈಗೂಡಿಸಿಕೊಂಡ ವಿ. ಸೀತಾಲಕ್ಷ್ಮೀ ವರ್ಮ ಅವರು ಬದುಕಿನಲ್ಲಿ ಬರುವ ಎಲ್ಲ ವಿಷಯಗಳ ಬಗ್ಗೆಯೂ ಈ ಕೃತಿಯಲ್ಲಿ ಚುಟುಕುಗಳ ಮೂಲಕ ಹೊಸದಾದ ಸಂದೇಶ ನೀಡಲು ಪ್ರಯತ್ನಿಸಿದ್ದಾರೆ ಎಂದು ನನಗನಿಸಿತು.

ಈ 'ಬೊಗಸೆಯೊಳಗಿನ ಚುಟುಕು ಸಾಗರ'ದಲ್ಲಿ ಕವಯಿತ್ರಿ ಲೀಲಾಜಾಲವಾಗಿ ಈಜಾಡಿದ್ದಾರೆ. ತಮ್ಮ ಮನದ ಭಾವನೆಗಳನ್ನು ಸಹಜವಾಗಿ ಅಭಿವ್ಯಕ್ತಿಸಿ, ಅದನ್ನು ಕಾವ್ಯವಾಗಿಸಿದ್ದಾರೆ. ಕಾವ್ಯಾತ್ಮಕವಾದ ಹಲವಾರು ಚುಟುಕುಗಳು ಈ ಸಂಕಲನದಲ್ಲಿವೆ. ಚರ್ಚೆ ಎನ್ನುವ ಚುಟುಕಿನಲ್ಲಿ

**'ಹಿಡಿ ಮಣ್ಣು ಬೇಡ ಸುಟ್ಟುಬಿಡಿ,**
**ಚರ್ಚೆಯೊಳಗೆ ಬಿದ್ದಿದ್ದ**
**ಜಡ ದೇಹಕ್ಕೇನು?**

ಮಿಸುಕಾಡಲೇ ಇಲ್ಲ!' ಎಂದು ಹೇಳುವ ಇವರಿಗೆ, ಚರ್ಚೆ ಎನ್ನುವುದು ಆರೋಗ್ಯಕರವಾಗಿದ್ದರೆ ಸರಿ, ಇಲ್ಲದಿರೆ ಅದು ವ್ಯರ್ಥ ಪ್ರಯತ್ನ, ಅದನ್ನು ಸುಟ್ಟುಬಿಡುವುದೇ ಉತ್ತಮ ಅನಿಸಿ ಈ ರೀತಿಯಾಗಿ ಹೇಳಿದ್ದಾರೆ, ಇದು ನಿಜಕ್ಕೂ ಅರ್ಥ ಪೂರ್ಣ ಚುಟುಕಾಗಿದೆ.

'ಬಾಳಿನಾಟ' ಎಂಬ ಚುಟುಕಿನಲ್ಲಿ ಬದುಕಿನ ಹಲವು ಮಜಲುಗಳನ್ನು ಹೀಗೆ ಚಿತ್ರಿಸಿದ್ದಾರೆ.

**'ಮೂರು ದಿಕ್ಕಿನಲ್ಲಿ**
**ನೂರು ಕಲಹ, ನೂರು ದಾಹ**
**ಹೀಗೂ ಹಾಗೂ**
**ಸಾವು ಬಾಳಿನಾಟ ನರಳಾಟ'**

ಹೀಗೆ ಕೇವಲ ನಾಲ್ಕು ಸಾಲುಗಳಲ್ಲಿ ಬಾಳನ್ನು ಚಿತ್ರಿಸಿರುವುದು ಅದ್ಭುತವೇ ಸರಿ.

> ಪುಸ್ತಕದ ಹೆಸರು: 'ಬೊಗಸೆಯೊಳಗಿನ ಚುಟುಕು ಸಾಗರ'
> ಕವಯಿತ್ರಿ: ವಿ. ಸೀತಾಲಕ್ಷ್ಮೀ ವರ್ಮ.
> ಪ್ರಥಮ ಮುದ್ರಣ: 2024.
> ಮುದ್ರಕರು: ಗುಪ್ತಾ ಆಫ್‌ಸೆಟ್ ಪ್ರಿಂಟರ್ಸ್, ವಿದ್ಯಾರಣ್ಯಪುರ-ಮೈಸೂರು.
> ಪ್ರಕಾಶಕರು: ಎಂ.ಜಿ. ಅರಸ್.

ಬೊಗಸೆಯೊಳಗಿನ ಚುಟುಕು ಸಾಗರದಲ್ಲಿ ವೈವಿಧ್ಯಮಯವಾದ ಚುಟುಕುಗಳು ಸಹೃದಯರ ಗಮನ ಸೆಳೆಯುತ್ತವೆ.

ಅಂತಹ ಕೆಲವು ಚುಟುಕುಗಳನ್ನಿಲ್ಲಿ ಹೆಸರಿಸಬಹುದು. ಉದಾಹರಣೆಗೆ, ಅರ್ಥವತ್ತಾದ ಬಾಳು, ಒಳದನಿ, ಕಾಯಕಯೋಗಿ, ಗುರಿ, ನೆರಳು, ಯಾಕೆ?, ಇದ್ದವರು, ಕಾಡದಿರು ಹೀಗೆ, ಜೊತೆಗಿಲ್ಲ, ದೇವರ ಮನೆಯಲ್ಲಿ, ಸಾಧನೆ, ಶಕ್ತಿ, ಮುಂತಾದ ಚುಟುಕುಗಳಲ್ಲಿ ಓದುಗರ ಗಮನ ಸೆಳೆಯುವ ಶಕ್ತಿ ಇದೆ.

ಇದೇ ಸಮಯದಲ್ಲಿ ವಾಚ್ಯತೆಯ ಕಾರಣದಿಂದ ಗಮನ ಸೆಳೆಯುವಲ್ಲಿ ವಿಫಲವಾಗಿವೆ. ಉದಾಹರಣೆಗೆ... ಸ್ಮಾರ್ಟ್, ಬಾಳಲಿಲ್ಲ, ವೇಷಧಾರಿ, ನನ್ನ ಕಾವ್ಯ, ಬೆಲೆಯಿಲ್ಲ, ಬಂಡೆಯಾಗಿದೆ, ಚೆಲುವಿಲ್ಲ ಮುಂತಾದ ಕೆಲವು ಚುಟುಕುಗಳಲ್ಲಿ ಕಾವ್ಯದ ಅಂಶಗಳು ಕಡಿಮೆಯಾಗಿ ವಾಚ್ಯತೆಯಿಂದಾಗಿ ಸೊಗಿದಂತೆ ಅನಿಸುತ್ತವೆ. ಕವಯಿತ್ರಿಯ ಪ್ರಥಮ ಪ್ರಯತ್ನ ಇದಾಗಿರುವುದರಿಂದ, ಸಾಹಿತ್ಯದಲ್ಲಿ ಇವೆಲ್ಲ ಸಾಮಾನ್ಯ ಸಂಗತಿ ಎನ್ನಬಹುದು.

ಅದೇನೇ ಇರಲಿ, ಕವಯಿತ್ರಿಯಿಂದ ಮುಂದಿನ ದಿನಗಳಲ್ಲಿ ಇದಕ್ಕಿಂತ ಉತ್ತಮವಾದ ಸಾಹಿತ್ಯ ಕೃತಿಗಳು ರಚನೆಯಾಗಲಿ, ಆ ಸಾಮರ್ಥ್ಯವೂ ಇವರಿಗಿದೆ.

ಇವರ ಚುಟುಕುಗಳು ಚುರುಕು ಮುಟ್ಟಿಸುವಂತೆ ಇವೆ ಎಂಬುದಂತೂ ಸತ್ಯ. ಇವರಿಂದ ಅಂತಹ ಸಾಹಿತ್ಯ ಹೊರಹೊಮ್ಮಲಿ ಎಂಬ ಆಶಯದೊಂದಿಗೆ...

**– ಶಿವಪ್ರಸಾದ್ ಹಾದಿಮನಿ.**
ಕನ್ನಡ ಉಪನ್ಯಾಸಕರು, ಕೊಪ್ಪಳ.

## ಸೀಟ್ ಹಂಚಿಕೆ ಮಂಥನ ಕಾರ್ಯಕ್ರಮ ಜೂ.28ಕ್ಕೆ

**■ವಿಜಯಸಾಕ್ಷಿ ಸುದ್ದಿ, ಹೂವಿನಹಡಗಲಿ**


ಹೂವಿನಹಡಗಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ವತಿಯಿಂದ ಯುಜಿಸಿಇಟಿ-2025ರ ಸೀಟ್ ಹಂಚಿಕೆ ಮಂಥನ ಕಾರ್ಯಕ್ರಮವನ್ನು ಜೂನ್ 28ರಂದು ಬೆಳಿಗ್ಗೆ 9.30ರಿಂದ ಮಧ್ಯಾಹ್ನ 1.30ರವರೆಗೆ ಹೂವಿನಹಡಗಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಆಯೋಜಿಸಲಾಗಿದೆ.

ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ಯುಜಿಸಿಇಟಿ-2025ರಲ್ಲಿ ಕಾಲೇಜು ಮತ್ತು ಕೋರ್ಸ್‌ಗಳ ಆಯ್ಕೆಯ ಕುರಿತು ತಿಳುವಳಿಕೆ ನೀಡಲು ಈ ಕಾರ್ಯಾಗಾರವನ್ನು ಏರ್ಪಡಿಸಲಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯ ಡಾ.ಅರುಣ ಕೆ.ವಿ-9844533535, ಡಾ.ಸಂಗಪ್ಪ ಗಾಣಿಗೇರ ನೋಡಲ್ ಅಧಿಕಾರಿ-8095107385, ವಿಭಾಗಾಧಿಕಾರಿಗಳು-9980913453, 9632253007, 7892316194, 9448433536 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಳೆದ 11 ವರ್ಷಗಳಿಂದ ದೇಶದಲ್ಲಿ 'ಅಘೋಷಿತ ತುರ್ತು ಪರಿಸ್ಥಿತಿ'ಯಿದೆ: ಕಾಂಗ್ರೆಸ್

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ದೇಶದಲ್ಲಿ ತುರ್ತು ಪರಿಸ್ಥಿತಿ ಜಾರಿಯಾಗಿ 50 ವರ್ಷದ ಅಂಗವಾಗಿ ಕೇಂದ್ರ ಸರ್ಕಾರ 'ಸಂವಿಧಾನ ಹತ್ಯೆ ದಿನ' ಆಚರಿಸುತ್ತಿದೆ. ಇದಕ್ಕೆ ತಿರುಗೇಟು ನೀಡಿರುವ ಕಾಂಗ್ರೆಸ್, "ದೇಶದಲ್ಲಿ ಕಳೆದ 11 ವರ್ಷಗಳಿಂದ ಅಘೋಷಿತ ತುರ್ತು ಪರಿಸ್ಥಿತಿಯಿದೆ. ಭಾರತದ ಪ್ರಜಾಪ್ರಭುತ್ವದ ಮೇಲೆ ಆಡಳಿತವು (ಕೇಂದ್ರ ಸರಕಾರ) ನಿರಂತರ ಮತ್ತು ಅಪಾಯಕಾರಿ ದಾಳಿಯನ್ನು ನಡೆಸುತ್ತಿದೆ" ಎಂದು ಹೇಳಿದೆ.



ಪ್ರಸ್ತುತ ಆಡಳಿತದಲ್ಲಿ ನಾಗರಿಕ ಸ್ವಾತಂತ್ರ್ಯಗಳನ್ನು ಹತ್ತಿಕ್ಕಲಾಗುತ್ತಿದೆ ಮತ್ತು ದ್ವೇಷ ಭಾಷಣವು ಅತಿರೇಕವಾಗಿದೆ ಎಂದು ಆರೋಪಿಸಿದೆ.

ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಹಾಗೂ ಸಂವಹನ ವಿಭಾಗದ ಉಸ್ತುವಾರಿ ಜೈರಾಮ್ ರಮೇಶ್ ಹೇಳಿಕೆ ನೀಡಿ, "ಸರ್ಕಾರದ ಟೀಕಾಕಾರರನ್ನು ನಿರಂತರವಾಗಿ ರಾಕ್ಷಸೀಕರಿಸಲಾಗುತ್ತಿದೆ. ಅಧಿಕಾರದಲ್ಲಿರುವವರು ದ್ವೇಷ ಮತ್ತು ಧರ್ಮಾಂಧತೆಯನ್ನು ಸಕ್ರಿಯವಾಗಿ ಪ್ರಚಾರ ಮಾಡುತ್ತಿದ್ದಾರೆ. ಶಾಂತಿಯುತ ಪ್ರತಿಭಟನೆಗಳನ್ನು ಹತ್ತಿಕ್ಕಲಾಗುತ್ತಿದೆ. ಪ್ರತಿಭಟನಾ ನಿರತ ರೈತರನ್ನು 'ಖಲಿಸ್ತಾನಿಗಳು' ಎಂದು ಬ್ರಾಂಡ್ ಮಾಡಲಾಗಿದೆ. ಜಾತಿ ಜನಗಣತಿಯ ಬೆಂಬಲಿಗರನ್ನು 'ನಗರ ನಕ್ಸಲರು' ಎನ್ನಲಾಗಿದೆ ಎಂದಿದ್ದಾರೆ.

"ಮಹಾತ್ಮ ಗಾಂಧಿಯ ಹಂತಕರನ್ನು ವೈಭವೀಕರಿಸುವ ವ್ಯಕ್ತಿಗಳನ್ನು ಕೊಂಡಾಡುತ್ತಿದ್ದಾರೆ. ಅಲ್ಪಸಂಖ್ಯಾತ ಸಮುದಾಯಗಳು ಭಯದಲ್ಲಿ ಬದುಕುತ್ತಿವೆ. ದುರ್ಬಲ ವರ್ಗದವರು, ವಿಶೇಷವಾಗಿ ದಲಿತರು ಅಸಮಾನತೆಗೆ ಗುರಿಯಾಗುತ್ತಿದ್ದಾರೆ.

### ಶ್ರೀರಂಗಪಟ್ಟಣದ ಶಾಸಕ ರಮೇಶ್ ಬಂಡಿ ಸಿದ್ದೇಗೌಡ ರಾಜೀನಾಮೆಗೆ ಮಹ್ಮದಶಫಿ ನಾಗರಕಟ್ಟಿ ಒತ್ತಾಯ

# ಜನ ಪ್ರತಿನಿಧಿಗೆ ಶೋಭೆ ತರುವ ಕಾರ್ಯವಲ್ಲ



**■ವಿಜಯಸಾಕ್ಷಿ ಸುದ್ದಿ, ಗದಗ**

ಮುಸ್ಲಿಂ ಸಮುದಾಯದವರು ಭೂಮಿಗಾಗಿ ಅರ್ಜಿ ಸಲ್ಲಿಸಿದರೆ ಆ ಅರ್ಜಿಯನ್ನು ಪುರಸ್ಕರಿಸಿ ಅವರಿಗೆ ಭೂಮಿಯನ್ನು ನೀಡಿದ್ದೇ ಆದರೆ ಅಂತಹ ಅಧಿಕಾರಿಗಳನ್ನು ನಾನು ಗಲ್ಲಿಗೇರಿಸುತ್ತೇನೆ ಎಂದು ಶ್ರೀರಂಗಪಟ್ಟಣದ ಶಾಸಕ ರಮೇಶ್ ಬಂಡಿ ಸಿದ್ದೇಗೌಡ ಬಹಿರಂಗವಾಗಿ ಹೇಳಿಕೆ ನೀಡಿರುವುದು ಖಂಡನೀಯ ಎಂದು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ರಾಜ್ಯಾಧ್ಯಕ್ಷ ಮಹ್ಮದಶಫಿ ನಾಗರಕಟ್ಟಿ ಹೇಳಿದರು.

ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಅವರು ಮಾತನಾಡುತ್ತಿದ್ದರು.

ಅವರೊಬ್ಬ ಜನಪ್ರತಿನಿಧಿಯಾಗಿರಲು ಅರ್ಹತೆಯನ್ನು ಕಳೆದುಕೊಂಡಿದ್ದಾರೆ. ಸರ್ಕಾರಿ ಅಧಿಕಾರಿಗಳಿಗೆ ಜೀವ ಬೆದರಿಕೆ ನೀಡುವುದು, ಅವರ ಕರ್ತವ್ಯಕ್ಕೆ ಅಡ್ಡಿಪಡಿಸುವುದು ಕ್ರಿಮಿನಲ್ ಸಂಗತಿ ಆಗಿರುತ್ತದೆ. ಸರ್ಕಾರಿ ಅಧಿಕಾರಿಗಳು ಅರ್ಜಿಗಳನ್ನು ಪರಿಶೀಲಿಸಿ ಯೋಗ್ಯವಾಗಿರುವ ವ್ಯಕ್ತಿಗಳಿಗೆ ಸೌಲಭ್ಯಗಳು ನೀಡುತ್ತಾರೆ.

> ಕಾಂಗ್ರೆಸ್ ಪಕ್ಷದ ಮತ್ತು ಮುಖ್ಯಮಂತ್ರಿಗಳ ಹೆಸರನ್ನು ಕೆಡಿಸಲು ಇಂತಹ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಇವರ ರಾಜೀನಾಮೆ ಪಡೆಯದಿದ್ದರೆ ಭವಿಷ್ಯದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಹಾನಿಯಾಗುವ ಸಂಭವವಿದೆ. ತಕ್ಷಣ ಇವರಿಂದ ರಾಜೀನಾಮೆ ಪಡೆಯಬೇಕು ಇಲ್ಲವಾದಲ್ಲಿ ಬಹಿರಂಗ ಕ್ಷಮೆ ಕೇಳಬೇಕು ಎಂದು ಮಹ್ಮದಶಫಿ ನಾಗರಕಟ್ಟಿ ಆಗ್ರಹಿಸಿದರು.

ಸರ್ಕಾರಿ ಅಧಿಕಾರಿಗಳನ್ನು ತುಚ್ಛವಾಗಿ ಕಾಣುವುದು ಮತ್ತು ಅವರಿಗೆ ಜೀವ ಬೆದರಿಕೆ ಹಾಕುವುದು ಒಬ್ಬ ಜನ ಪ್ರತಿನಿಧಿಗೆ ಶೋಭೆ ತರುವ ಕಾರ್ಯವಲ್ಲ ಎಂದರು.

ಒಂದು ಸಮುದಾಯದವರಿಗೆ ಸರ್ಕಾರದ ಸೌಲಭ್ಯಗಳು ದೊರಕಬಾರದೆಂದು ಹೇಳಿಕೆ ನೀಡುವುದು ಸಂವಿಧಾನ ವಿರೋಧಿ ನಡೆಯಾಗಿರುತ್ತದೆ. ಒಬ್ಬ ಜನ ಪ್ರತಿನಿಧಿಯಾಗಿ ಸಮಸ್ತ ಜನರ ಏಳಿಗೆಯನ್ನು ಬಯಸುವವನೇ ನಿಜವಾದ ಜನಪ್ರತಿನಿಧಿಯಾಗಿರುತ್ತಾನೆ.

ಎಲ್ಲ ಹಿಂದುಳಿದ ಬಡ ಸಮುದಾಯಗಳು ಅಭಿವೃದ್ಧಿ ಹೊಂದಿದರೆ ನಮ್ಮ ಭಾರತವು ಒಂದು ಬಲಾಢ್ಯ ರಾಷ್ಟ್ರವಾಗುತ್ತದೆ ಎಂದರು.


ಈ ಸಂದರ್ಭದಲ್ಲಿ ಧಾರವಾಡ ಮತ್ತು ಗದಗ ಜಿಲ್ಲಾ ಉಸ್ತುವಾರಿಗಳಾದ ಜಾಫರ್ ಡಾಲಾಯತ್, ಎಸ್. ಎಸ್. ಖಾದ್ರಿ, ಮುಜಮಿಲ್ ಬಳ್ಳಾರಿ, ಇಲಿಯಾಸ್ ಶಿರಹಟ್ಟಿ, ಇಸಾಕ್ ಇರಕಲ್, ಮುನ್ನಾ ಕಲ್ಮನಿ, ಹನೀಫ್ ಇರಕಲ್ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಇನ್ಸ್ಟಾಗ್ರಾಮ್ ನಲ್ಲಿ ಪರಿಚಯವಾಗಿದ್ದ ಗೃಹಿಣಿ ಕೊಲೆ ಮಾಡಿದ್ದ ಆರೋಪಿ ಅರೆಸ್ಟ್!

**■ವಿಜಯಸಾಕ್ಷಿ ಸುದ್ದಿ, ಮಂಡ್ಯ**

ಇನ್ಸ್ಟಾಗ್ರಾಮ್ ನಲ್ಲಿ ಪರಿಚಯವಾಗಿದ್ದ ಗೃಹಿಣಿಯನ್ನು ಕೊಲೆಗೈದು ಶವವನ್ನು ಜೋಳದಕಡ್ಡಿಯ ಮೆದೆಯಲ್ಲಿ ಮುಚ್ಚಿಟ್ಟಿದ್ದ ಆರೋಪಿಯನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಹಾಸನದ ಹೊಸಕೊಪ್ಪಲು ಗ್ರಾಮದ ಪ್ರೀತಿ (35) ಕೊಲೆಯಾದ ಗೃಹಿಣಿ.





ಮಂಡ್ಯ ಜಿಲ್ಲೆ ಕೆ.ಆರ್.ಪೇಟೆ ತಾಲೂಕಿನ ಕರೋಟಿ ಗ್ರಾಮದಲ್ಲಿ ಭಾನುವಾರ ಘಟನೆ ಜರುಗಿದೆ. ಹಾಸನದ ಹೊಸಕೊಪ್ಪಲು ಗ್ರಾಮದ ಪ್ರೀತಿ (35) ಕೊಲೆಯಾದ ಗೃಹಿಣಿ. ಕೆ. ಆರ್ ಪೇಟೆ ತಾಲ್ಲೂಕಿನ ಕರೋಟಿ ಗ್ರಾಮದ ಪುನೀತ್ (28)ಕೊಲೆ ಆರೋಪಿ. ಪುನೀತ್ ಹಾಗೂ ಪ್ರೀತಿ ಇವರಿಬ್ಬರಿಗೂ ಕಳೆದ 10 ದಿನಗಳ ಹಿಂದಷ್ಟೇ ಇನ್ಸ್ಟಾಗ್ರಾಮ್ ನಲ್ಲಿ ಪರಿಚಯವಾಗಿತ್ತು. ಭಾನುವಾರ ಗೃಹಿಣಿ ಜೊತೆ ಮೈಸೂರು, ಕೆ.ಆರ್.ಎಸ್ ನಲ್ಲಿ ಸುತ್ತಾಡಿದ್ದಾನೆ. ಬಳಿಕ ಕತ್ತರಘಟ್ಟ ಅರಣ್ಯ ಪ್ರದೇಶದಲ್ಲಿ ಗೃಹಿಣಿಯನ್ನು ಹತ್ಯೆ ಮಾಡಿ ಮೆದೆಯಲ್ಲಿ ಶವ ಮುಚ್ಚಿಟ್ಟಿದ್ದಾನೆ. ಇತ್ತ ಹೆಂಡತಿ ಕಾಣಿಸದೇ ಕಂಗಾಲಾಗಿದ್ದ ಗಂಡ, ಸುಂದರೇಶ್ ಹಾಸನ ಪೊಲೀಸ್ ಠಾಣೆಗೆ ದೂರು ಕೊಟ್ಟಿದ್ದಾರೆ. ಬಳಿಕ ತನಿಖೆ ಕೈಗೊಂಡ ಪೊಲೀಸರು, ಮೊಬೈಲ್ ನಂಬರ್ ಮೂಲಕ ಆರೋಪಿ ಪತ್ತೆ ಹಚ್ಚಿದ್ದಾರೆ. ಸ್ಥಳಕ್ಕೆ ಹಾಸನ ಹಾಗೂ ಕಿಕ್ಕೇರಿ ಪೊಲೀಸರು ಭೇಟಿ ಪರಿಶೀಲನೆ ನಡೆಸಿದ್ದು, ಮುಂದಿನ ತನಿಖೆ ಕೈಗೊಂಡಿದ್ದಾರೆ. ಗೃಹಿಣಿ ಮೈ ಮೇಲಿದ್ದ ಚಿನ್ನಕ್ಕಾಗಿ ಆರೋಪಿ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ಕಿಕ್ಕೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಲಕ್ಷ್ಮೇಶ್ವರ ತಾಲೂಕಾ ಕೃಷಿಕ ಸಮಾಜದಿಂದ ತಹಸೀಲ್ದಾರರಿಗೆ ಮನವಿ

# ವಿಮಾ ಸೌಲಭ್ಯ ಕಲ್ಪಿಸಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ರೈತರ ಮುಂಗಾರಿನ ಬಹುಮುಖ್ಯ ಬೆಳೆ ಹೆಸರು ಬೆಳೆ ಅತಿಯಾದ ಮಳೆ, ತೇವಾಂಶ ಹೆಚ್ಚಳದಿಂದ ಬೇರು ಕೊಳೆ, ಹಳದಿ ರೋಗಕ್ಕೆ ತುತ್ತಾಗಿ ಬಹುತೇಕ ಬೆಳೆ ಹಾನಿಯಾಗಿದೆ. ಈ ಬಗ್ಗೆ ಸರ್ಕಾರ ಮತ್ತು ಜಿಲ್ಲಾಡಳಿತ, ವಿಮಾ ಕಂಪನಿಗಳಿಗೆ ವಸ್ತುಸ್ಥಿತಿ ವಿವರಿಸಿ ಬೆಳೆಹಾನಿ ಪರಿಹಾರ ಮತ್ತು ವಿಮಾ ಸೌಲಭ್ಯ ಕಲ್ಪಿಸುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಲಕ್ಷ್ಮೇಶ್ವರ ತಾಲೂಕಾ ಕೃಷಿಕ ಸಮಾಜದ (ನವದೆಹಲಿ) ಅಧ್ಯಕ್ಷ ಚನ್ನಪ್ಪ ಷಣ್ಮುಕಿ ನೇತೃತ್ವದಲ್ಲಿ ರೈತರು ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.



ಈ ವೇಳೆ ಮಾತನಾಡಿದ ಅವರು, ಸಕಾಲಿಕ ಮಳೆಯಿಂದಾಗಿ ಈ ವರ್ಷ ಜೂನ್ ಮೊದಲ ವಾರದಲ್ಲಿಯೇ ತಾಲೂಕಿನಾದ್ಯಂತ ನೂರಾರು ಎಕರೆ ವ್ಯಾಪ್ತಿಯಲ್ಲಿ ಹೆಸರು ಬಿತ್ತನೆ ಮಾಡಿದ್ದಾರೆ. ಬಿತ್ತನೆ ನಂತರ ಅತಿಯಾದ ಮಳೆಯಿಂದ ಜಮೀನಿನಲ್ಲಿ ನೀರು ನಿಂತು ಮೊಳಕೆ ಹಂತದ ಬೆಳೆ ಕೊಳೆತು ಹೋಯಿತು. ಅಳಿದುಳಿದ ಬೆಳೆಯೂ ಅತಿಯಾದ ತೇವಾಂಶದಿಂದ ಹಾಳಾಗುತ್ತಿದೆ. ಒಂದು ಎಕರೆ ಕ್ಷೇತ್ರದಲ್ಲಿ ಹೆಸರು ಬಿತ್ತನೆಗೆ ಬೀಜ, ಗೊಬ್ಬರ ಇತರೆಲ್ಲ ವೆಚ್ಚ ಸೇರಿ 20 ಸಾವಿರ ರೂ ಖರ್ಚು ಮಾಡಲಾಗಿದೆ. ಮುಂದೇನು ಎಂಬ ಚಿಂತೆಯಲ್ಲಿ ರೈತರಿದ್ದಾರೆ. ಈ ನಿಟ್ಟಿನಲ್ಲಿ ತುರ್ತಾಗಿ ತಹಸೀಲ್ದಾರು, ಕೃಷಿ ಇಲಾಖೆಯವರು ಬೆಳೆಹಾನಿ ಕ್ಷೇತ್ರಕ್ಕೆ ಭೇಟಿ ನೀಡಿ ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸಬೇಕು. ಹೆಸರು ಬಿತ್ತನೆ ಮಾಡಿದ ರೈತರು ಬೆಳೆಗೆ ಬೆಳೆ ವಿಮೆ ಪಾವತಿಸಿದ್ದು, ಸದ್ಯದಲ್ಲಿ ಬೆಳೆ ದೃಢೀಕರಣ/ಜಿಪಿಎಸ್ ಮಾಡುತ್ತಿದ್ದಾರೆ. ವಿಮಾ ಕಂಪನಿ ಜತೆ ಚರ್ಚಿಸಿ ಪರಿಹಾರ ಕಲ್ಪಿಸುವ ಕೆಲಸ ಮಾಡಬೇಕು ಎಂದರು.

ಈ ವೇಳೆ ಸುರೇಶ ಸಿಂದಗಿ, ಪಕ್ಕೀರಪ್ಪ ಹೂಗಾರ, ಗಿರಿಯಪ್ಪಗೌಡ ಪಾಟೀಲ, ವೆಂಕಟೇಶ ಪಾಟೀಲ, ಜಗನಾಥಗೌಡ ಪಾಟೀಲ, ಪ್ರಕಾಶ ಶಿಂದಗಿ, ನಾಗರಾಜ ಜಂತ್ಲಿ, ಮಲ್ಲನಗೌಡ ಪಾಟೀಲ, ರಮೇಶ ಸಿದ್ದನಗೌಡ, ದ್ಯಾವನಗೌಡ ಧೇಶಿ, ಷಣ್ಮುಖಗೌಡ ಪಾಟೀಲ, ಶೇಖರಪ್ಪ ಸೊರಟೂರ, ಮಹಾಂತಪ್ಪ ಸೊರಟೂರ, ಮಹಾದೇವಪ್ಪ ಕುಂದಗೋಳ ಮುಂತಾದವರಿದ್ದರು.

# ಯೋಗದಿಂದ ಆರೋಗ್ಯ ಸಂಪತ್ತು

**■ವಿಜಯಸಾಕ್ಷಿ ಸುದ್ದಿ, ಗದಗ**

ಯೋಗವು ಯಾವುದೇ ಖರ್ಚಿಲ್ಲದೇ ನಮಗೆ ಉತ್ತಮ ಆರೋಗ್ಯವನ್ನು ನೀಡುತ್ತದೆ ಮತ್ತು ಅದು ನಮ್ಮ ದೊಡ್ಡ ಸಂಪತ್ತಿಗೆ ಕಾರಣವಾಗುತ್ತದೆ ಎಂದು ಶಿವ ಪಾರ್ವತಿ ಯೋಗ ಫೌಂಡೇಶನ್‌ನ ಯೋಗ ಗುರುಗಳಾದ ಸಿದ್ಧಣ್ಣ ಜವಳಿ ಹೇಳಿದರು.

ಅವರು ಶಿವಸಂಗಮ ಸಮೂಹ ಸಂಸ್ಥೆ, ಶಿವಸಂಗಮ ವಿವಿಧೋದ್ದೇಶಗಳ ಸೌಹಾರ್ದ ಸಹಕಾರಿ ಸಂಘ ಏರ್ಪಡಿಸಿದ್ದ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.



ಸಾಮಾನ್ಯವಾಗಿ ಯೋಗವೆಂದರೆ ತಿರುಗುವ, ಬಾಗುವ, ಚಾಚುವ ಮತ್ತು ಉಸಿರಾಟದ ವ್ಯಾಯಾಮವೆಂದು ಜನರು ತಿಳಿದಿದ್ದಾರೆ. ಆದರೆ ನಿಜವಾಗಿಯೂ ಯೋಗವೆಂದರೆ ವ್ಯಕ್ತಿಯ ಶಾರೀರಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಶಕ್ತಿಯನ್ನು ಹೊರಹೊಮ್ಮಿಸುವ ಒಂದು ವಿಜ್ಞಾನವಾಗಿದೆ ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಮಾಗಡಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹಾಗೂ ಜಿಲ್ಲಾ ಮಟ್ಟದ ಸರ್ವೋತ್ತಮ ಪ್ರಶಸ್ತಿ ಪುರಸ್ಕೃತ ಎಸ್.ವೈ. ಕುಂಬಾರ ಮಾತನಾಡಿ, ಹೊರಜಗತ್ತಿನಲ್ಲಿ ಏನಾಗುತ್ತಿದೆ ಎಂಬುದನ್ನು ನಾವು ನಿಯಂತ್ರಿಸಲು ಸಾಧ್ಯವಿಲ್ಲ. ಆದರೆ ನಮ್ಮ ದೇಹದಲ್ಲಿ ಏನಾಗಬೇಕು ಎಂಬುದನ್ನು ನಾವು ಯೋಗದಿಂದ ನಿಯಂತ್ರಿಸಬಹುದು ಎಂದರು. ದ್ವಿತೀಯ ಪಿಯುಸಿ ವಾಣಿಜ್ಯ ವಿಭಾಗದಲ್ಲಿ ರಾಜ್ಯಕ್ಕೆ 10ನೇ ರ‍್ಯಾಂಕ್ ಮತ್ತು ಜಿಲ್ಲೆಗೆ 2ನೇ ರ‍್ಯಾಂಕ್ ಪಡೆದ ವಿಜಯರಾಜ ಶಿದ್ಲಿಂಗ್, ಅಧ್ಯಕ್ಷತೆ ವಹಿಸಿದ್ದ ಶಿವಸಂಗಮ ಸಮೂಹ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಜಿ.ಎಂ. ಪಲ್ಲೇದ ಮಾತನಾಡಿದರು.

ಜಗದೀಶ ಹುಡೇದ ಸ್ವಾಗತಿಸಿ ನಿರೂಪಿಸಿದರು. ಮಹೇಶ ಗಾಣಿಗೇರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಿರಣಕುಮಾರ ಹಿರೇಮಠ ವಂದಿಸಿದರು.

## ಪರಿಶ್ರಮದಿಂದ ಓದಿದರೆ ಬದುಕು ಬದಲಾಗುತ್ತದೆ




■ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ತಾಲೂಕಿನ ಅಲಗಿಲವಾಡ ಶಾಲೆಗೆ ಮಕ್ಕಳ ಸಾಹಿತಿಗಳಾದ ನಿಂಗಣ್ಣ ಕುಂಟಿ ಅನಿರೀಕ್ಷಿತವಾಗಿ ಭೇಟಿ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಿಂಗಣ್ಣ ಕುಂಟಿ, ಚಿಕ್ಕವರಿದ್ದಾಗ ಹೆಚ್ಚು ಓದುವ ಅಭಿಲಾಷೆಯನ್ನು ಬೆಳೆಸಿಕೊಂಡಿದ್ದೆ. ಸಮಾಜದಲ್ಲಿನ ಏನನ್ನಾದರೂ ಸಾಧಿಸಬೇಕು ಎಂದರೆ ಶಿಕ್ಷಣದಿಂದ ಮಾತ್ರ ಸಾಧ್ಯ. ನನ್ನ ನೆಚ್ಚಿನ ಸಾಹಿತಿಗಳಾದ ದ.ರಾ. ಬೇಂದ್ರೆಯವರು ನಿಂಗಣ್ಣ ಎಂದು ಕರೆದು ಬೆನ್ನು ತಟ್ಟಿ ಪ್ರೋತ್ಸಾಹ ನೀಡಿದ್ದರಿಂದ ನಿಮ್ಮ ಮುಂದೆ ಸಾಹಿತಿಯಾಗಿ ನಿಂತಿದ್ದೇನೆ. ಅದಕ್ಕಾಗಿ ನೀವು ಕೂಡಾ ಪರಿಶ್ರಮ ಪಟ್ಟು ಅಭ್ಯಾಸ ಮಾಡಿದರೆ ನಿಮ್ಮ ಗುರಿ ಮುಟ್ಟಲು ಸಾಧ್ಯ ಎಂದು ಮಕ್ಕಳಿಗೆ ಕಿವಿಮಾತು ಹೇಳಿದರು.

ಮಕ್ಕಳಿಗೆ ತಮ್ಮ ಜೀವನದ ಸಾಧನೆಗಳನ್ನು ತಿಳಿಸಿದ ಮಕ್ಕಳ ಸಾಹಿತಿ ನಿಂಗಣ್ಣ ಕುಂಟಿಯವರಿಗೆ ಪ್ರಧಾನ ಗುರುಗಳಾದ ಹಾಲೇಶ ಜಕ್ಕಲಿ, ಶಿಕ್ಷಕರಾದ ನೇಮೇಶ ಯರಗುಪ್ಪಿ ಧನ್ಯವಾದ ಅರ್ಪಿಸಿದರು.

### ಜಗನ್ನಾಥರಾವ್ ಜೋಶಿ ಅವರ 105ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಎಂ.ಎಸ್. ಕರಿಗೌಡ್ರ ಅಭಿಮತ

# ಜಗನ್ನಾಥರಾವ್ ಪೋರ್ಚುಗೀಸರಿಗೆ ಸಿಂಹಸ್ವಪ್ನವಾಗಿದ್ದರು

■ವಿಜಯಸಾಕ್ಷಿ ಸುದ್ದಿ, ಗದಗ

ನರಗುಂದ ನೆಲದಲ್ಲಿ ಹುಟ್ಟಿ ಬೆಳೆದ ಮಹಾನ್ ದೇಶಭಕ್ತ, ಕರ್ನಾಟಕದ ಕೇಸರಿ ಜಗನ್ನಾಥರಾವ್ ಜೋಶಿ ಅವರು ಗೋವಾ ವಿಮೋಚನಾ ಚಳುವಳಿಯ ಪ್ರೇರಣಾ ಶಕ್ತಿಯಾಗಿದ್ದರು ಎಂದು ನಿಗಮ ಮಂಡಳಿ ಮಾಜಿ ಅಧ್ಯಕ್ಷ ಎಮ್.ಎಸ್. ಕರಿಗೌಡ್ರ ಹೇಳಿದರು.

ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ನಡೆದ ಜಗನ್ನಾಥರಾವ್ ಜೋಶಿ ಅವರ 105ನೇ ಜನ್ಮದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಗೋವಾವನ್ನು ಪೋರ್ಚುಗೀಸರು ಆಳುತ್ತಿದ್ದ ಕಾಲದಲ್ಲಿ ಆ ರಾಜ್ಯದ ಪ್ರವೇಶಕ್ಕೆ ಅನುಮತಿ ಕಡ್ಡಾಯವಾಗಿತ್ತು. ಚಳುವಳಿಯ ನೇತೃತ್ವ ವಹಿಸಿದ್ದ ಜಗನ್ನಾಥರನ್ನ ಅಕ್ರಮ ಪ್ರವೇಶದ ಹೆಸರಲ್ಲಿ ಸಾವಂತ್ವಾಡ ಅರಣ್ಯ ಪ್ರದೇಶದಲ್ಲಿ




ಬಂಧಿಸಿ ಕಾರಾಗ್ರಹದಲ್ಲಿಟ್ಟು ಹಿಂಸಿಸಲಾಯಿತು. ಎಷ್ಟೋ ದಿನಗಳ ನಂತರ ನ್ಯಾಯಾಲಯದಲ್ಲಿ ಹಾಜರುಪಡಿಸಿದಾಗ ಜೋಶಿ ಅವರು 'ನಾನು ನಿಮ್ಮನ್ನು ಗೋವಾದಿಂದ ಹೊರ ಹೋಗುವಂತೆ ಹೇಳಲು ಬಂದಿರುವೆ. ಇದು ನನ್ನ ಮಾತೃಭೂಮಿಯ ಅವಿಭಾಜ್ಯ ಅಂಗ. ಇಲ್ಲಿ ನಿಮಗೇನು ಕೆಲಸ, ಗೋವಾ ಬಿಟ್ಟು ತೊಲಗಿ' ಎಂದು ಸಿಂಹ ಘರ್ಜನೆ ಮಾಡಿದ್ದು ಪೋರ್ಚುಗೀಸರ ಜಂಗಾಭಲವೇ ಕಮರಿಹೋಗಲು ಕಾರಣವಾಯಿತು ಎಂದರು.

ನಾಡಿನ ಒಳಿತಿಗಾಗಿ, ಸಮುದಾಯದಗಳ ಸೌಹಾರ್ದತೆಗಾಗಿ ಸಂಘಟನೆ, ಪಕ್ಷ, ಸರ್ಕಾರಗಳ ಪ್ರತಿನಿಧಿಯಾಗಿ ಸಂಪೂರ್ಣ ಸಮರ್ಪಣಾ ಭಾವದಿಂದ ಜನಸೇವೆಗೆ ತಮ್ಮನ್ನು ಅರ್ಪಿಸಿಕೊಂಡಿದ್ದರು ಎಂದು ಎಮ್.ಎಸ್. ಕರಿಗೌಡ್ರ ಸ್ಮರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ ವಹಿಸಿದ್ದರು. ಬಸವಣ್ಣೆಪ್ಪ ಚಿಂಚಲಿ, ಜಗನ್ನಾಥಸಾ ಭಾಂಡಗೆ, ಎಂ.ಎಂ. ಹಿರೇಮಠ, ನಾಗರಾಜ ಕುಲಕರ್ಣಿ, ಕೆ.ಪಿ. ಕೋಟಿಗೌಡ್ರ, ಸುರೇಶ ಮರಳಪ್ಪನವರ ವೇದಿಕೆಯಲ್ಲಿ ಉಪಸ್ಥಿತರಿದ್ದರು. ನಗರಸಭೆ ಸದಸ್ಯ ಅನಿಲ ಅಬ್ಬಿಗೇರಿ, ಸುಧೀರ ಕಾಟೀಗರ, ಅಶೋಕ ಕುಡತಿನಿ, ಸಂತೋಷ ಅಕ್ಕಿ, ಸಿದ್ದು ಮೊರಬದ, ರಮೇಶ ಸಜ್ಜಗಾರ, ಶಂಕರ ಖಾಕಿ, ದೇವೇಂದ್ರಪ್ಪ ಗೋಟುರ, ಅಪ್ಪಣ್ಣ ಟೆಂಗಿನಕಾಯಿ, ಸ್ವಾತಿ ಅಕ್ಕಿ, ರೇಖಾ ಬಂಗಾರಶೆಟ್ರ, ಕವಿತಾ ಬಂಗಾರಿ, ದೇವೇಂದ್ರಪ್ಪ ಹೂಗಾರ, ಕುಮಾರ ಮಾರನಬಸರಿ, ಸಂತೋಷ ಕಲ್ಯಾಣಿ, ರಾಚಯ್ಯ ಹೊಸಮಠ, ವಿನೋದ ಹಂಸನೂರ ಮುಂತಾದ ಗಣ್ಯರು, ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

> ಹಿರಿಯ ಮುಖಂಡ ಶ್ರೀಪತಿ ಉಡುಪಿ ಮಾತನಾಡಿ, ಕರ್ನಾಟಕದಲ್ಲಿ ಜನಸಂಘ ಹಾಗೂ ಬಿಜೆಪಿಯನ್ನು ಕಟ್ಟಿ ಬೆಳೆಸುವಲ್ಲಿ ಜಗನ್ನಾಥರ ಸಂಘಟನಾ ಪ್ರವಾಸ, ಅಧ್ಯಯನ, ಪರಿಶ್ರಮ, ಸಂಕಲ್ಪ, ಹೋರಾಟಗಳು ಮಹತ್ತರ ಪಾತ್ರ ವಹಿಸಿವೆ. ಯಾವುದೇ ದೇಶ ಸುಭದ್ರವಾಗಿ ಇರಬೇಕಾದರೆ ಅಲ್ಲಿಯ ಜನರು ವೈಚಾರಿಕ ಹಾಗು ಸೈದ್ಧಾಂತಿಕಾವಾಗಿ ರೂಪಗೊಂಡಾಗ ಮಾತ್ರ ಸಾಧ್ಯ ಎಂಬುದು ಅವರ ನಂಬಿಕೆಯಾಗಿತ್ತು ಆ ಕಾರಣದಿಂದಲೇ ಜಗನ್ನಾಥರ ಎಲ್ಲಾ ಕೆಲಸ-ಕಾರ್ಯಗಳು ಆ ದೃಷ್ಟಿಕೋನ ಹೊಂದಿರುತ್ತಿದವು ಎಂದರಲ್ಲದೆ, ಜಗನ್ನಾಥ ಜೋಶಿ ಅವರ ಉತ್ತರ ಕರ್ನಾಟಕ ಪ್ರವಾಸ, ಭಾಷಣ ಇತ್ಯಾದಿ ಸಂಗತಿಗಳು, ಅವರ ಜೊತೆಗಿನ ಒಡನಾಟವನ್ನ ಹಂಚಿಕೊಂಡರು.

## ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ತೋಂಟದ ಸಿದ್ದೇಶ್ವರ ಪದವಿಪೂರ್ವ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಡೆಂಗ್ಯೂ, ಮಲೇರಿಯಾ ಹಾಗೂ ಇನ್ನಿತರ ರೋಗಗಳ ಕುರಿತು ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಜಿಮ್ಸ್ ಹಾಗೂ ತಾಲೂಕಾ ವೈದ್ಯರ ತಂಡದ ಆಶ್ರಯದಲ್ಲಿ ಆಯೋಜಿಸಲಾಗಿತ್ತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ. ವಸುಂದರಾ ಮಾತನಾಡಿ, ವಿದ್ಯಾರ್ಥಿಗಳು ಡೆಂಗ್ಯೂ ಮತ್ತು ಮಲೇರಿಯಾದಂತಹ ರೋಗಗಳು ಯಾವ ರೀತಿ ನಮಗೆ ಅಪಾಯವನ್ನುಂಟುಮಾಡುತ್ತವೆ ಹಾಗೂ ಅವುಗಳನ್ನು ತಡೆಯುವ ಕ್ರಮಗಳು ಹೇಗೆ ಎಂದು ವಿದ್ಯಾರ್ಥಿಗಳಿಗೆ ವಿವರಿಸಿದರು.

ಅತಿಥಿಗಳಾದ ವೈ.ವೈ. ಹಕ್ಕಿಯವರು ಮಾತನಾಡಿ, ಈ ಕಾಯಿಲೆಗಳು ಸೊಳ್ಳೆಗಳು ಕಚ್ಚುವುದರಿಂದ ಮನುಷ್ಯನ ಮೇಲೆ ಅತ್ಯಂತ ಬೇಗ ಹರಡಿ ದುಷ್ಪರಿಣಾಮವನ್ನು ಉಂಟುಮಾಡುತ್ತವೆ. ಆದ್ದರಿಂದ ಕಾಯಿಲೆ ಹರಡದಂತೆ ಯಾವ ರೀತಿಯಾಗಿ ಮುನ್ನೆಚ್ಚರಿಕೆ ವಹಿಸಬೇಕು ಎಂದು ವಿದ್ಯಾರ್ಥಿಗಳಿಗೆ ತಿಳುವಳಿಕೆ ಮೂಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ವೈ.ಎಸ್. ಮತ್ತೂರ ಮಾತನಾಡಿ, ಈ ರೀತಿಯ ರೋಗ ಲಕ್ಷಣಗಳು ಕಂಡುಬಂದಲ್ಲಿ ತಕ್ಷಣವೇ ವೈದ್ಯರನ್ನು ಭೇಟಿಯಾಗಬೇಕು ಮತ್ತು ತಮ್ಮ ಸುತ್ತಮುತ್ತಲಿನ ಪರಿಸರವನ್ನು ಶುದ್ಧವಾಗಿಟ್ಟುಕೊಂಡು ಆರೋಗ್ಯವತವಾಗಿ ಜೀವನವನ್ನು ನಡೆಸಬೇಕು ಎಂದು ಸಲಹೆ ನೀಡಿದರು.

ಉಪನ್ಯಾಸಕರಾದ ವಿಜಯಲಕ್ಷ್ಮೀ ಕೊಣ್ಣೂರ ನಿರೂಪಿಸಿದರು, ಅಮಿತ್ ಬುವಾ ವಂದಿಸಿದರು. ವೈದ್ಯರಾದ ಡಾ. ಮಹೇಶ್ ಹಾಗೂ ಜಿಮ್ಸ್ ವೈದ್ಯಕೀಯ ಕಾಲೇಜಿನ ವೈದ್ಯ ವಿದ್ಯಾರ್ಥಿಗಳು, ಸಿದ್ದೇಶ್ವರ ಕಾಲೇಜಿನ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಗುರು-ಹಿರಿಯರನ್ನು ಗೌರವಿಸಿದರೆ ದುಃಖಗಳು ದೂರ

■ವಿಜಯಸಾಕ್ಷಿ ಸುದ್ದಿ, ಗದಗ

ಆರು ದಶಕಗಳ ಹಿಂದೆ ಪ್ರಾಥಮಿಕ ಹಂತದಲ್ಲಿ ಪಾಠ ಹೇಳಿದ ವಿದ್ಯಾಗುರುಗಳಾದ, ಈಗ 95ರ ಇಳಿವಯಸ್ಸಿನ ಇಬ್ರಾಹಿಮಸಾಬ ತಳ್ಳಿಹಾಳರ ನಿವಾಸಕ್ಕೆ ತೆರಳಿ ಗದುಗಿನ ನಿವಾಸಿ ಕರಿಬಸಯ್ಯ ಎಸ್.ಹಿರೇಮಠ ಶಾಲು ಹೊದಿಸಿ ಫಲಪುಷ್ಪ ನೀಡಿ ಗೌರವಿಸಿದರು.

ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಪ್ರೊ. ವಿಜಯ ಮಹಾಂತದೇವರು ಮಾತನಾಡಿ, ಗುರು-ಶಿಷ್ಯ ಪರಂಪರೆಯನ್ನು ಜಾಗತಿಕವಾಗಿ ವಿಸ್ತರಿಸಿದ ಗೌರವ ನಮ್ಮ ದೇಶಕ್ಕಿದೆ. ಗುರು-ಹಿರಿಯರನ್ನು ಗೌರವಿಸುವಾತನಿಗೆ ಜೀವನದಲ್ಲಿ ದುಃಖವೇ ಇರುವುದಿಲ್ಲ ಎಂಬ ಹಿರಿಯರ ಮಾತು ಇಂದಿನ ಸನ್ನಿವೇಶ ನೋಡಿದಾಗ ನಮ್ಮ ಕಣ್ಮುಂದೆ ಬಂದು ನಿಲ್ಲುತ್ತದೆ. ಅರವತ್ತು ವರ್ಷಗಳ ಹಿಂದೆ ಪ್ರಾಥಮಿಕ ಹಂತದಲ್ಲಿ ವಿದ್ಯೆ ಕಲಿಸಿದ ಗುರುಗಳನ್ನು ನೆನಪಿಸಿಕೊಂಡು



ಇಬ್ರಾಹಿಮ್‌ಸಾಬ ತಳ್ಳಿಹಾಳ ಗುರುಗಳನ್ನು ಗೌರವಿಸಿದ್ದು ಅಭಿನಂದನಾರ್ಹ ಎಂದರು.

ಸನ್ಮಾನ ಸ್ವೀಕರಿಸಿದ ಇಬ್ರಾಹಿಮ್‌ಸಾಬ ತಳ್ಳಿಹಾಳ ಗುರುಗಳು ಮಾತನಾಡಿ, ಬದುಕಿನ ಕೊನೆಯ ಅಂಚಿನಲ್ಲಿರುವ ನಮಗೆ ನಮ್ಮ ಶಿಷ್ಯರಾದ ಕರಿಬಸಯ್ಯ ಹಿರೇಮಠ ನಮ್ಮ ನಿವಾಸಕ್ಕೆ ಬಂದು ಸತ್ಕರಿಸಿದ ಕ್ಷಣ ಆನಂದ ತಂದಿದೆ. ನಿಜಕ್ಕೂ ನಮ್ಮ ಬದುಕಿನಲ್ಲಿ ಇದೊಂದು ಅವಿಸ್ಮರಣೀಯ ದಿನ ಎಂದರು.

ಈ ಸಂದರ್ಭದಲ್ಲಿ ಸವಡಿ ಅಂಜುಮನ್ ಕಮಿಟಿ ಚೇರಮನ್ ಹಸನಸಾಬ ನದಾಫ್, ಅಬ್ದುಲ್‌ಸಾಬ ನದಾಫ್, ಫಕ್ರುಸಾಬ ತಳ್ಳಿಹಾಳ, ಮೆಹಬೂಬಅಲಿ ತಳ್ಳಿಹಾಳ, ಪ್ರಭು ಹಿರೇಮಠ, ಸಿದ್ದಯ್ಯ ಹಿರೇಮಠ ಮುಂತಾದವರು ಉಪಸ್ಥಿತರಿದ್ದರು.

## ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ವ`ು೦ಳ`ಗ`೦೦ದ` ಪಟ್ಟಣದ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ ಮುಳಗುಂದ ವ್ಯಾಪ್ತಿಯಲ್ಲಿನ ಅಬ್ಬಿಗೇರಿ ಕೆರೆ ಲಿಲಾವು, ಕ್ಯಾದಿಗೆ ಲೀಲಾವು, ಮುಳಗುಂದ ಪಟ್ಟಣ ಪಂಚಾಯತಿ ವ್ಯಾಪ್ತಿಯ 6 ಶುದ್ಧ ಕುಡಿಯುವ ನೀರಿನ ಘಟಕ ನಿರ್ವಹಣೆಯ ಲೀಲಾವು, ಸಂತೆ ಕರ ಲೀಲಾವು, ಅನುಪಯುಕ್ತ ವಸ್ತುಗಳ ಲೀಲಾವು ಜೂನ್ 30 ರಂದು ಬೆ 11 ಗಂಟೆಗೆ ಮುಳಗುಂದ ಪಟ್ಟಣ ಪಂಚಾಯತ್ ಕಾರ್ಯಾಲಯದಲ್ಲಿ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಪಟ್ಟಣ ಪಂಚಾಯತ್ ಮುಳಗುಂದ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

## ದರಪಟ್ಟಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ವಚ್ಛ ಭಾರತ ಮಿಷನ್ ( ನಗರ ) 2.0 ಯೋಜನೆಯಡಿ ಮಾಹಿತಿ ಶಿಕ್ಷಣ ಸಂವಹನ ಮತ್ತು ಸಾಮರ್ಥ್ಯಾಭಿವೃದ್ಧಿ ಘಟಕಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳಿಗೆ ದರವಾರು ಪಟ್ಟಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿ ಇರುವವರು ದರವಾರು ಪಟ್ಟಿ ಸಲ್ಲಿಸಲು ಅರ್ಜಿಯನ್ನು ಮುಖ್ಯಾಧಿಕಾರಿ ಪಟ್ಟಣ ಪಂಚಾಯತ್ ಮುಳಗುಂದ ಈ ವಿಳಾಸಕ್ಕೆ ಜುಲೈ 1 ರೊಳಗೆ ಸಲ್ಲಿಸಬೇಕು. ಷರತ್ತು ಹಾಗೂ ಹೆಚ್ಚಿನ ವಿವರಗಳಿಗಾಗಿ ಮುಳಗುಂದ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳ ಕಾ೦ು೯ಾ೯ಲ೦ು೦ವ`ನ`್ನು ಸಂಪರ್ಕಿಸಬಹುದಾಗಿದೆ.

## ಅಕ್ರಮ ನಡೆಯುತ್ತಿದ್ದರೂ ಕ್ರಮವಿಲ್ಲ

▶▶ಮೊದಲನೇ ಪುಟದಿಂದ

ವಾಸುದೇವ ಸ್ವಾಮಿ ಅವರು ಈ ಅಕ್ರಮ ತಿಳಿದಿದ್ದರೂ ಕಣ್ಣು ಮುಚ್ಚಿ ಕುಳಿತಿರುವುದು ಅನುಮಾನಕ್ಕೆ ಕಾರಣವಾಗಿದೆ.

ತಾಲೂಕಿನ ಅಕ್ಕಿಗುಂದ, ಶೆಟ್ಟಿಕೇರಿ, ಗೊಜನೂರ ಸೇರಿ ಅನೇಕ ಕಡೆ ಈ ರೀತಿ ಮಣ್ಣು ಅಕ್ರಮದೊಂದಿಗೆ ಮರಳು ಸಾಗಾಣಿಕೆಯೂ ನಡೆಯುತ್ತಿರುವುದಕ್ಕೆ ಇವರ ಸಹಕಾರವೇ ಕಾರಣವಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಕರವೇ ಸ್ವಾಭಿಮಾನಿ ಸೇನೆಯ ಕಾರ್ಯಾಧ್ಯಕ್ಷ ಇಸ್ಮಾಯಿಲ್ ಆಡೂರ, ತಾಲೂಕಾಧ್ಯಕ್ಷ ನಾಗೇಶ ಅಮರಾಪೂರ, ಕೈಸರ್ ಮಹ್ಮದ್‌ಅಲಿ, ಗೌಸಮೋದಿನ್ ಜಮಖಂಡಿ, ನದೀಮ್ ಕುಂದಗೋಳ ಇದ್ದರು.

## ಮಾರಾಕಾಸ್ತ್ರಗಳಿಂದ ಕೊಚ್ಚಿ ಮೂವರ ಬರ್ಬರ ಕೊಲೆ!

■ವಿಜಯಸಾಕ್ಷಿ ಸುದ್ದಿ, ಕಲಬುರಗಿ

ಮಾರಾಕಾಸ್ತ್ರಗಳಿಂದ ಕೊಚ್ಚಿ ಮೂವರನ್ನು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಕಲಬುರಗಿ ಹೊರವಲಯದ ಪಟ್ನಾ ಗ್ರಾಮದ ಬಳಿ ತಡರಾತ್ರಿ ಜರುಗಿದೆ.

ಕೊಲೆಯಾದವರನ್ನು 32 ವರ್ಷದ ಸಿದ್ಧಾರೂಢ, 25 ವರ್ಷದ ಜಗದೀಶ್, 35 ವರ್ಷದ ರಾಮಚಂದ್ರ ಎಂದು ಗುರುತಿಸಲಾಗಿದೆ.

ತಡರಾತ್ರಿ ಡ್ರೈವರ್ ಡಾಬಾಗೆ ನುಗ್ಗಿದ ಹಂತಕರು ಮಾರಾಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿದ್ದಾರೆ. ಈ ಹಿಂದೆ ಸೋಮು ಎಂಬಾತನ ಕೊಲೆ ಕೇಸ್ ನಲ್ಲಿ ಕೊಲೆಯಾದ ಸಿದ್ದಾರೂಡ, ಜಗದೀಶ್, ರಾಮಚಂದ್ರ ಜೈಲಿಗೆ ಹೋಗಿ ಬಂದಿದ್ದರು ಎಂದು ತಿಳಿದು ಬಂದಿದೆ.

ಹೀಗಾಗಿ ಹಳೆಯ ದ್ವೇಷದ ಕಾರಣ ನಿನ್ನೆ ತಡರಾತ್ರಿ ರಾಚಯ್ಯ, ಈರಣ್ಣಾ, ನಾಗರಾಜ್ ಸೇರಿ ಹಲವು ದುಷ್ಕರ್ಮಿಗಳು ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ.

ಘಟನೆ ಸಂಬಂಧ ಕಲಬುರಗಿ ಸಬ್‌ರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಏಳು ಜನ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದು, ತನಿಖೆ ಮುಂದುವರಿದಿದೆ.

## ಉಚಿತ ಮೋತಿ ಬಿಂದು ಶಸ್ತ್ರ ಚಿಕಿತ್ಸೆ



■ವಿಜಯಸಾಕ್ಷಿ ಸುದ್ದಿ, ಗದಗ

ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಸಂಶೋಧನಾ ಸಂಸ್ಥೆ ಹುಲಕೋಟಿ ಹಾಗೂ ಎಂ.ಎಂ. ಜೋಶಿ ಕಣ್ಣಿನ ಆಸ್ಪತ್ರೆ ಹುಬ್ಬಳ್ಳಿ ಇವರ ಸಹಯೋಗ, ಗದಗ ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ ಇವರ ಸಹಕಾರ ಹಾಗೂ ಎಚ್. ಕೆ. ಪಾಟೀಲ ಸೇವಾ ತಂಡದ ಸಹಾಯದಿಂದ ಒಟ್ಟು 14 ಜನ ಫಲಾನುಭವಿಗಳಿಗೆ ಉಚಿತವಾಗಿ ಕಣ್ಣಿನ ಪೊರೆಯ ಶಸ್ತ್ರಚಿಕಿತ್ಸೆಯನ್ನು ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆಯಲ್ಲಿ ಮಾಡಲಾಯಿತು.

ಸಂಸ್ಥೆಯ ಚೇರಮನ್ ಡಾ. ಎಸ್.ಆರ್. ನಾಗನೂರ ಹಾಗೂ ಗೌರವ ಕಾರ್ಯದರ್ಶಿ ಡಾ. ವೇಮನ್ ಆರ್.ಸಾವಕಾರ ಇವರು ಶಿಬಿರದಲ್ಲಿ ಉಪಸ್ಥಿತರಿದ್ದು ಮಾರ್ಗದರ್ಶನ ನೀಡಿದರು. ಕಣ್ಣಿನ ಪೊರೆಯ ಶಸ್ತ್ರಚಿಕಿತ್ಸೆಯನ್ನು ಎಂ.ಎಂ. ಜೋಶಿ ಆಸ್ಪತ್ರೆಯ ವೈದ್ಯರು ನೆರವೇರಿಸಿದರು. ಇದಕ್ಕೂ ಮುನ್ನ ಫಲಾನುಭವಿಗಳಿಗೆ ಉಚಿತವಾಗಿ ಬಿಪಿ, ಶುಗರ್, ರಕ್ತ ತಪಾಸಣೆ ಮಾಡಲಾಯಿತು.

ಶಿಬಿರದಲ್ಲಿ ಕೆ.ಎಚ್. ಪಾಟೀಲ ಆಸ್ಪತ್ರೆಯ ಸಿಬ್ಬಂದಿಗಳು ಪಾಲ್ಗೊಂಡು ಸಹಾಯ-ಸಹಕಾರ ನೀಡಿದರು.

## ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ




■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ರೋಣ ತಾಲೂಕಿನ ಇಟಗಿಯ ಆದರ್ಶ ವಿದ್ಯಾಲಯಗಳಲ್ಲಿ 7, 8 ಮತ್ತು 9ನೇ ತರಗತಿಯಲ್ಲಿ ಖಾಲಿ ಇರುವ ಸೀಟುಗಳಿಗೆ ಪ್ರವೇಶ ಪರೀಕ್ಷೆ ನಡೆಸುವ ಮೂಲಕ ದಾಖಲಾತಿಯ ಆಯ್ಕೆ ಪರೀಕ್ಷೆ ಪ್ರಕ್ರಿಯೆ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಜುಲೈ 08 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದ್ದು, ಜುಲೈ 15ರಂದು ಇಟಗಿಯ ಆದರ್ಶ ಶಾಲೆಯಲ್ಲಿ ಆಯ್ಕೆ ಪರೀಕ್ಷೆ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಇಟಗಿ ಆದರ್ಶ ವಿದ್ಯಾಲಯದ ಮುಖ್ಯೋಪಾಧ್ಯಾಯರಾದ ಎಫ್.ಎಚ್.ಥಾಲಾಯತ್ ಅವರನ್ನು ಸಂಪರ್ಕಿಸಲು ಕೋರಲಾಗಿದೆ.

## ಎತ್ತುಗಳ ಮೈ ತೊಳೆದು ಸಿಂಗರಿಸಿದ ಬಸವರಾಜ ಹೊರಟ್ಟಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಕೃಷಿಕರ ಬದುಕಿಗೆ ಆಧಾರವಾದ, ರೈತರ ಪಾಲಿಗೆ ಜೀವನಾಡಿಯಾದ ಎತ್ತುಗಳ ಮೈತೊಳೆದು ಮಣ್ಣೆತ್ತಿನ ಅಮವಾಸ್ಯೆಯನ್ನು ಸಭಾಪತಿ ಬಸವರಾಜ ಹೊರಟ್ಟಿಯವರು ವಿಶಿಷ್ಟವಾಗಿ ಆಚರಿಸಿದರು.

ಹೊರಟ್ಟಿಯವರಿಗೆ ಎತ್ತುಗಳೆಂದರೆ ಅಪಾರ ಪ್ರೀತಿ. ಇತ್ತೀಚೆಗೆ ಯಂತ್ರೋಪಕರಣಗಳು ಕೃಷಿ ಕೆಲಸಕ್ಕೆ ಸಹಾಯಕವಾಗಿದ್ದರೂ ಎತ್ತುಗಳ ಅವಶ್ಯಕತೆ ಬೇಕೇ ಬೇಕಾಗುತ್ತದೆ. ರೈತರ ಎಲ್ಲ ಕಾರ್ಯಗಳಿಗೆ ಹೆಗಲು ಕೊಡುವ ಎತ್ತುಗಳಿಗೆ ಹಿಂದಿನಿಂದಲೂ ಪೂಜ್ಯನೀಯ ಸ್ಥಾನವಿದ್ದು, ಎತ್ತುಗಳು ರೈತರ ಮನೆಗೆ ಶೋಭೆ ಹಾಗೂ ಮಂಗಲಕರವಾಗಿವೆ.

ಸಭಾಪತಿ ಬಸವರಾಜ ಹೊರಟ್ಟಿಯವರು ಹುಬ್ಬಳ್ಳಿ ತಾಲೂಕಿನ ಛಬ್ಬಿ ಬಳಿ ಇರುವ ನಿಸರ್ಗ ತೋಟದಲ್ಲಿ 100ಕ್ಕೂ ಹೆಚ್ಚು ವಿವಿಧ ತಳಿಯ ಎತ್ತುಗಳನ್ನು ಸಾಕುವ ಮೂಲಕ ದನ-ಕರುಗಳ ಮೇಲಿನ ಪ್ರೀತಿಯನ್ನು ಸಾಬೀತುಪಡಿಸಿದ್ದಾರೆ. ತಮ್ಮ ತೋಟಕ್ಕೆ ಎತ್ತುಗಳು ಅತ್ಯಂತ ಶೋಭೆ ಎಂದು ಅತ್ಯಂತ ಖುಷಿಯಿಂದ ಹೇಳುತ್ತಿರುತ್ತಾರೆ.



## ನಿಧನ

### ಪ್ರಕಾಶ ಗಣಪತಿ ಹುಲಬಜಾರ್



**ಲಕ್ಷ್ಮೇಶ್ವರ:** ಪಟ್ಟಣದ ಸರಾಫ್ ಬಜಾರ್‌ನ ನಿವಾಸಿ, ಯೋಗ ಸಾಧಕರ ಸಮಿತಿಯ ಕಾರ್ಯದರ್ಶಿ ಪ್ರಕಾಶ ಗಣಪತಿ ಹುಲಬಜಾರ್ (46) ಬುಧವಾರ ಹುಬ್ಬಳ್ಳಿ ಹತ್ತಿರ ಕುಂದಗೋಳ ಕ್ರಾಸ್‌ನಲ್ಲಿ ಬೈಕ್ ಅಪಘಾತದಲ್ಲಿ ಮೃತಪಟ್ಟಿದ್ದಾರೆ.

ಮೃತ ದುರ್ದೈವಿ ಬುಧವಾರ ಅಮವಾಸ್ಯೆ ನಿಮಿತ್ತ ಶಿರಹಟ್ಟಿ ಹತ್ತಿರದ ವರವಿ ಮೌನೇಶ್ವರನ ದರ್ಶನ ಪಡೆದು ಬಳಿಕ ಕೆಲಸದ ನಿಮಿತ್ತ ಹುಬ್ಬಳ್ಳಿಗೆ ಹೋಗಿ ವಾಪಸ್ ಬರುವಾಗ ಬೈಕ್ ಮತ್ತು ಎಲ್‌ಪಿಜಿ ಸರಬರಾಜು ಮಾಡುವ ಗೂಡ್ಸ್ ವಾಹನದ ನಡುವೆ ಡಿಕ್ಕಿ ಸಂಭವಿಸಿದೆ. ಕೂಡಲೇ ಹುಬ್ಬಳ್ಳಿ ಕಿಮ್ಸ್‌ಗೆ ದಾಖಲಿಸಿದಾಗ್ಯೂ ಚಿಕಿತ್ಸೆ ಫಲಿಸದೇ ಮೃತಪಟ್ಟಿದ್ದಾರೆ. ಈ ಕುರಿತು ಹುಬ್ಬಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತರಿಗೆ ತಂದೆ, ಪತ್ನಿ, ಪುತ್ರ, ಸಹೋದರರಿದ್ದಾರೆ.

## ಅಮನ್ ಶಾಲೆಯಲ್ಲಿ ಶಾಲಾ ಸಂಸತ್ ಚುನಾವಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಅಮನ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಶಾಲಾ ಸಂಸತ್ ಚುನಾವಣೆಯನ್ನು ನಡೆಸಲಾಯಿತು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ಎಸ್.ಎಚ್. ಸವದತ್ತಿ, ಚುನಾವಣೆಯಲ್ಲಿ ಮತದಾನದ ಮಹತ್ವವನ್ನು ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು. ಚುನಾಯಿತ ಪ್ರತಿನಿಧಿಗಳಾದ ನೇಹಾ ರೋಣದ–ಶಾಲಾ ಸಂಸತ್ತಿನ ಮುಖ್ಯಸ್ಥಳಾಗಿ, ಖಾಲಿದ್ ಲಕ್ಕುಂಡಿ–ಶಿಕ್ಷಣ ಮಂತ್ರಿ, ಅರ್ಶ ಕುದರಿ–ಶಿಕ್ಷಣ ಮಂತ್ರಿ, ನೂರಜಹಾನ ಶಾಲಗಾರ–ಕ್ರೀಡಾ ಮಂತ್ರಿ, ಅಮಾನುಲ್ಲಾ ಪಾನಿಗಟ್ಟಿ–ಕ್ರೀಡಾ ಮಂತ್ರಿ, ಮುಸ್‌ಫೀರಾ ನದಾಫ್–ಆರೋಗ್ಯ ಮಂತ್ರಿ, ಶೀರಿನಬಾನು ಕಿನ್ನಾಳ–ಆರೋಗ್ಯ ಮಂತ್ರಿ, ಅರ್ಶಿಯಾಸುಲ್ತಾನಾ ಮುಲ್ಲಾ–ಸ್ವಚ್ಛತಾ ಮಂತ್ರಿ, ಸುಮಯ್ಯಾ ಅಣ್ಣಿಗೇರಿ–ಸ್ವಚ್ಛತಾ ಮಂತ್ರಿ, ಅರ್ಪಾ ಡಂಬಳ–ಸಾಂಸ್ಕೃತಿಕ ಮಂತ್ರಿ, ಐಮನ್ ಬೊದ್ಲೇಖಾನ–ಸಾಂಸ್ಕೃತಿಕ ಮಂತ್ರಿ, ಸಾಹೀಲ್ ನಾಗರಕಟ್ಟಿ–ಪ್ರವಾಸ ಮಂತ್ರಿ, ರುಕ್ಸಾರ ಚೋಪದಾರ–ಪ್ರವಾಸ ಮಂತ್ರಿ, ಸಹನಾ ರಾಲದೊಡ್ಡಿ–ಹಣಕಾಸು ಮಂತ್ರಿ, ರಿಹಾನ ಬಿಜಾಪುರ್–ಹಣಕಾಸು ಮಂತ್ರಿ, ಅತುಫಾಮರಿಯಮ್ ಶೇಖ–ಪರೀಕ್ಷಾ ಮಂತ್ರಿ, ಕೃಪಾ ಕರಿಯಪ್ಪನ್ನವರ–ಪರೀಕ್ಷಾ ಮಂತ್ರಿಯಾಗಿ ಆಯ್ಕೆಗೊಂಡು ಪ್ರಮಾಣ ವಚನ ಸ್ವೀಕರಿಸಿದರು.

ಚುನಾವಣೆಯಲ್ಲಿ ಆಯ್ಕೆಯಾದ ಶಾಲಾ ವಿದ್ಯಾರ್ಥಿಗಳಿಗೆ ಶಾಲಾ ಆಡಳಿತ ಮಂಡಳಿಯ ಸರ್ವ ಸದಸ್ಯರು ಶುಭ ಕೋರಿದರು.

### ಅಕ್ಕನ ಬಳಗದ ವನಮಹೋತ್ಸವ ಕಾರ್ಯಕ್ರಮದಲ್ಲಿ ನಂದಿವೇರಿ ಸ್ವಾಮೀಜಿ ಕರೆ

# ಬಂಡವಾಳಶಾಹಿಗಳಿಂದ ಕಪ್ಪತ್ತಗುಡ್ಡವನ್ನು ಸಂರಕ್ಷಿಸಬೇಕಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಚಿನ್ನ, ಖನಿಜ, ಗಿಡಮೂಲಿಕೆ ಸಂಪತ್ತಿನ ಕಪ್ಪತ್ತಗುಡ್ಡ ಐತಿಹಾಸಿಕ ಪರಂಪರೆಯುಳ್ಳದ್ದು. ಪರಿಶುದ್ಧ ವಾಯುವಿಗೆ ದೇಶದಲ್ಲಿಯೇ ನಂ. 1ನೇ ಸ್ಥಾನದಲ್ಲಿರುವ ಕಪ್ಪತ್ತಗುಡ್ಡದ ಮೇಲೆ ಬಂಡವಾಳಶಾಹಿಗಳು ಕಣ್ಣಿಟ್ಟಿದ್ದಾರೆ. ಕಪ್ಪತ್ತಗುಡ್ಡವನ್ನು ಮುಂದಿನ ಜನಾಂಗಕ್ಕೆ ಉಳಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಕಪ್ಪತ್ತಗಿರಿಯ ನಂದಿವೇರಿ ಸಂಸ್ಥಾನಮಠದ ಪೂಜ್ಯ ಶಿವಕುಮಾರ ಮಹಾಸ್ವಾಮಿಗಳು ಹೇಳಿದರು.

ಅವರು ಮಂಗಳವಾರ ನಗರದ ಅಕ್ಕನ ಬಳಗ ಏರ್ಪಡಿಸಿದ್ದ ವನಮಹೋತ್ಸವ ಹಾಗೂ ಮಾಸಿಕ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡುತ್ತಿರು.

ಕಪ್ಪತ್ತಗುಡ್ಡದ ಸಕಲ ಸಂಪತ್ತನ್ನು ಅರಿತ ಬ್ರಿಟೀಷರು 1892ರಲ್ಲಿ ಕಪ್ಪತ್ತಗುಡ್ಡ ಸಂರಕ್ಷಿತ ಅರಣ್ಯ ಪ್ರದೇಶವೆಂದು ಗೆಜೆಟ್‌ನಲ್ಲಿ ದಾಖಲಿಸಿ 144 ವರ್ಷಗಳೇ ಕಳೆದಿವೆ. ಇಂತಹ ಸಂಪದ್ಭರಿತ ಕಪ್ಪತ್ತಗುಡ್ಡದ ಮೇಲೆ ನೇತಾಡುತ್ತಿರುವ ತೂಗುಕತ್ತಿಯನ್ನು ತಪ್ಪಿಸಲು, ಬಂಡವಾಳಶಾಹಿಗಳ ಕಣ್ಣಿನಿಂದ ಕಪ್ಪತ್ತಗುಡ್ಡವನ್ನು ಸಂರಕ್ಷಿಸಲು ನಾವೆಲ್ಲರೂ ಬದ್ಧತೆಯಿಂದ ಹೋರಾಟಕ್ಕೆ ಸಜ್ಜಾಗಬೇಕಿದೆ ಎಂದರು. ಕಪ್ಪತ್ತಗುಡ್ಡದಿಂದಾಗಿ ಸುತ್ತಲಿನ 15 ಜಿಲ್ಲೆಗಳು ಮಳೆ–ಬೆಳೆ ಕಾಣುವಂತಾಗಿದೆ. ಇಂತಹ ಕಪ್ಪತ್ತಗುಡ್ಡಕ್ಕೆ ನಾವೆಲ್ಲರೂ ವಾರಸುದಾರರಾಗಬೇಕು. ಕಪ್ಪತ್ತಗುಡ್ಡ ಎಲ್ಲರ ಸ್ವತ್ತು. ಗದುಗಿನ ಅಕ್ಕನ ಬಳಗ ಕ್ರಿಯಾಶೀಲತೆಯಿಂದ ಕಾರ್ಯ ಮಾಡುತ್ತಿದ್ದು, ಮಹಿಳಾ ಜಾಗೃತಿ, ಪರಿಸರ ಜಾಗೃತಿ ಮುಂತಾದ ಸಮಾಜಮುಖಿ ಕಾರ್ಯಗಳಿಂದಾಗಿ ತನ್ನ ಹಿರಿಮೆಯನ್ನು ಮೆರೆದಿದೆ. ಅಕ್ಕನ ವಚನ ಸಾಹಿತ್ಯ, ಅನುಭಾವ ಸಾಹಿತ್ಯವನ್ನು ಜನ–ಮನಕ್ಕೆ ತಲುಪಿಸುವ ಕಾರ್ಯವನ್ನು ಅಕ್ಕನ ಬಳಗ ಮುಂದುವರೆಸಿಕೊಂಡು ಬಂದಿದೆ ಎಂದರು.



ಅಕ್ಕನ ಬಳಗಕ್ಕೆ 11 ಲಕ್ಷ ರೂ.ಗಳನ್ನು ದೇಣಿಗೆ ನೀಡಿದ ಶಾಂತಾ ಅಂದಾನಪ್ಪ ಗೌಡರ ಅವರನ್ನು ಸಮಾರಂಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು. ವಿಮಲಾ ಪರ್ವತಗೌಡ್ರ, ಜ್ಯೋತಿ ದಾನಪ್ಪಗೌಡ್ರ, ದೀಪಾ ಉಗಲಾಟದ, ಭಾಗ್ಯಾ ಗಡ್ಡಿ, ಸುಮೇದಾ ಕೋಟಿ, ವಿಜಯಲಕ್ಷ್ಮೀ ಬಿರಾದಾರ, ಪ್ರಭಾವತಿ ಚವಡಿ, ಮಂಜುಳಾ ಹೊಳಗುಂದಿ ಅವರನ್ನು ಅಕ್ಕನ ಬಳಗದ ನೂತನ ಸದಸ್ಯರನ್ನಾಗಿ ಬರಮಾಡಿಕೊಳ್ಳಲಾಯಿತು.

> ಕೃಷಿ ಪ್ರಧಾನವಾದ ಭಾರತದಲ್ಲಿ ಕೃಷಿಗೆ ಹೆಚ್ಚಿನ ಒತ್ತು ನೀಡಬೇಕು. ಕೃಷಿಕ ಕುಟುಂಬಗಳು ಉಳಿಯಬೇಕು, ಅವಿಭಕ್ತ ಕುಟುಬಗಳು ಹೆಚ್ಚಾಗಬೇಕು ಎಂದ ಶಿವಕುಮಾರ ಮಹಾಸ್ವಾಮಿಗಳು, ಗಂಡ–ಹೆಂಡತಿ, ಒಂದೆರಡು ಮಕ್ಕಳಿಗೆ ಸ್ಥಿಮಿತಗೊಳ್ಳುತ್ತಿರುವ ಕುಟುಂಬಗಳು ದ್ವೀಪಗಳಾಗದೇ ಮನ–ಮನೆ ಬೆಳಗುವ ದೀಪಗಳಾಗಬೇಕು ಎಂದರು.

ಹಸಿರು ಬಣ್ಣದ ಮ್ಯಾಚಿಂಗ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಪವಿತ್ರಾ ಬಿರಾದಾರ ಅವರನ್ನು ಗೌರವಿಸಲಾಯಿತು.

ಡಾ. ಶೇಖರ ಸಜ್ಜನರ, ಆನಂದ ಪೋತ್ನೀಸ್, ಡಾ. ಮಹಾಂತೇಶ ಬಾತಾಖಾನಿ ಮಾತನಾಡಿದರು. ರಾಜಕ್ಕ ಶೆಟ್ಟರ ಪ್ರಾರ್ಥಿಸಿದರು. ಅಧ್ಯಕ್ಷತೆ ವಹಿಸಿದ್ದ ಅಕ್ಕನ ಬಳಗದ ಅಧ್ಯಕ್ಷೆ ಜಯಶ್ರೀ ಹುಬ್ಬಳ್ಳಿ ಸ್ವಾಗತಿಸಿದರು. ಭಕ್ತಿಸೇವೆಯನ್ನು ಕಸ್ತೂರಿ ಹಿರೇಗೌಡ್ರ ವಹಿಸಿದ್ದರು. ಶಿವಲೀಲಾ ಅಕ್ಕಿ ನಿರೂಪಿಸಿದರು. ಕಾರ್ಯದರ್ಶಿ ಜಯಶ್ರೀ ಪಾಟೀಲ ವಂದಿಸಿದರು. ವೇದಿಕೆಯ ಮೇಲೆ ಖಜಾಂಚಿ ಶಿವಲೀಲಾ ಹಿರೇಮಠ, ಮೃತ್ಯುಂಜಯ ಸಂಕೇಶ್ವರ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಅಕ್ಕನ ಬಳಗದ ಟ್ರಸ್ಟಿಗಳಾದ ಅಧ್ಯಕ್ಷೆ ಕಸ್ತೂರಿ ಹಿರೇಗೌಡ್ರ, ಅನ್ನಪೂರ್ಣ ಮಾಳೆಕೊಪ್ಪಮಠ, ಶಾಂತಾ ಗೌಡರ, ಉಷಾ ದಡೂತಿ, ಶಿವಲೀಲಾ ಕುರಡಗಿ, ನಾಗರತ್ನ ಹುಬ್ಬಳ್ಳಿಮಠ, ಮೀನಾಕ್ಷಿ ಸಜ್ಜನ, ಪ್ರೇಮಾ ಮೇಟಿ, ಶಾರದಾ ಹಿರೇಮಠ, ಗೀತಾ ಮಾನ್ವಿ, ಸುಜಾತಾ ಮಾನ್ವಿ, ಶಶಿರೇಖಾ ಶಿಗ್ಲಿಮಠ, ಶಾಂತಾ ಸಂಕನೂರ, ಸುವರ್ಣ ವಸ್ತ್ರದ, ಲಲಿತಾ ಬಾಳಿಹಳ್ಳಿಮಠ, ಶೈಲಾ ಹಿರೇಮಠ, ಪಾರ್ವತಿದೇವಿ ಮಾಳೆಕೊಪ್ಪಮಠ, ಸುವರ್ಣ ಹೊಸಂಗಡಿ, ಶಾರದಾ ಬೊಮ್ಮಸಾಗರ, ಶಾರದಾ ಎಸ್.ಹಿರೇಮಠ, ವಿಜಯಕುಮಾರ ಮಾಳೆಕೊಪ್ಪಮಠ, ಶಿವಕುಮಾರ ಮಾನ್ವಿ, ವಿಜಯಕುಮಾರ ಬಾಳಿಹಳ್ಳಿಮಠ, ಕಾರ್ತಿಕ ಶಿಗ್ಲಿಮಠ, ಲಿಂಗರಾಜ ಶಿಗ್ಲಿಮಠ, ಉಮೇಶ ಹುಬ್ಬಳ್ಳಿ ಮುಂತಾದವರು ಪಾಲ್ಗೊಂಡಿದ್ದರು.

## 6 ತಿಂಗಳೊಳಗೆ ನೀರಿನ ಸಮಸ್ಯೆ ಬಗೆಹರಿಸುವಿರಾ?

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಮತಕ್ಷೇತ್ರದ, ಗದಗ–ಬೆಟಗೇರಿ ಅವಳಿ ನಗರದ ಜನತೆ ಸುಮಾರು 40 ವರ್ಷಗಳಿಂದ ಕುಡಿಯುವ ನೀರಿಗಾಗಿ ಪರದಾಡುತದತಿದ್ದು, ಸಮಸ್ಯೆ ಇಂದಿಗೂ ಹಾಗೆಯೇ ಇದೆ. ಮಾನ್ಯ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರು ಇಲ್ಲಿನ ನೀರಿನ ಸಮಸ್ಯೆಯನ್ನೇ ಬಗೆಹರಿಸದ ಸಚಿವರು ರಾಜ್ಯ, ದೇಶ ಮತ್ತು ಅಂತಾರಾಷ್ಟ್ರೀಯ ರಾಜಕಾರಣದ ವಿಷಯಗಳ ಕುರಿತು ಮಾರ್ಮಿಕವಾಗಿ ಮಾತನಾಡುತ್ತಾರೆ ಎಂದು ಬಿಜೆಪಿ ಗದಗ ಜಿಲ್ಲಾ ಅಧ್ಯಕ್ಷ ರಾಜು ಕುರುಡಗಿ ಹೇಳಿದ್ದಾರೆ.



ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಸಚಿವರು ರಾಜಕಾರಣದಲ್ಲಿ ಪ್ರಭಾವಿಗಳು, ಕರ್ನಾಟಕದಲ್ಲಿ ಹೆಸರುವಾಸಿಯೂ ಆಗಿದ್ದಾರೆ. ಆದರೆ, ರಾಜಕಾರಣದ ಇಷ್ಟು ದಿನಗಳ ಸಾಧನೆಗಳು ಇರಲಿ, ಗದಗ ಮತಕ್ಷೇತ್ರದ ನೀರಿನ ಜ್ವಲಂತ ಸಮಸ್ಯೆಯನ್ನು ಮುಂದಿನ 6 ತಿಂಗಳ ಒಳಗಾಗಿ ಬಗೆಹರಿಸಲು ಸಾಧ್ಯವೇ? ಮುಖ್ಯಮಂತ್ರಿಗಳ ಆಪ್ತರಾದ ಸಚಿವರು ವಿಶೇಷ ಅನುದಾನ ತಂದು ನೀರಿನ ಜ್ವಲಂತ ಸಮಸ್ಯೆಯನ್ನು ಬಗೆಹರಿಸಿದರೆ ಹಾರ್ದಿಕವಾಗಿ ಅಭಿನಂದಿಸುತ್ತೇನೆ ಎಂದಿದ್ದಾರೆ.

## ಡಿ. ಮೋಹನರಾವ್‌ರಿಗೆ ಶ್ರದ್ಧಾಂಜಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮರಾಠಾ ಸಮಾಜದ ಗಣ್ಯರು ಹಾಗೂ ಮರಾಠಾ ಸಂಘದ ಮಾಜಿ ಅಧ್ಯಕ್ಷರಾಗಿದ್ದ ಮೋಹನರಾವ್ ಎನ್.ಸಾಳುಂಕೆ ಇವರು ಜೂನ್ 22ರಂದು ಇಹಲೋಕ ತ್ಯಜಿಸಿದ ಪ್ರಯುಕ್ತ ಅರುಣಕುಮಾರ ಬಿ.ಚವ್ಹಾಣ ಇವರ ಅಧ್ಯಕ್ಷತೆಯಲ್ಲಿ ಪದಾಧಿಕಾರಿಗಳು, ಆಡಳಿತ ಮಂಡಳಿಯವರು, ಸಮಾಜ ಬಾಂಧವರು, ಮಹಿಳಾ ಮಂಡಳದವರು ಹಾಗೂ ಯುವಕ ಸಂಘದವರು ಶ್ರದ್ಧಾಂಜಲಿ ಸಭೆ ಸೇರಿ, ಅವರು ಸಮಾಜಕ್ಕೆ ಸಲ್ಲಿಸಿದ ಸೇವೆ, ಅಧ್ಯಕ್ಷರಾಗಿ ನಡೆಸಿದ ಆಡಳಿತದ ವೈಖರಿ ಮತ್ತು ನೇರಾನೇರ ನುಡಿಗಳ ಕುರಿತು ಸ್ಮರಿಸಿಕೊಂಡರು.

ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಪ್ರಾರ್ಥಿಸಿ ಮೌನಾಚರಣೆ ಮಾಡಲಾಯಿತು. ಸಭೆಯಲ್ಲಿ ಬಸವರಾಜ ಜೆ.ಹುಬ್ಬಳ್ಳಿ, ಸುರೇಶ ಎನ್.ಬೇಂದ್ರೆ, ಮಾರುತಿರಾವ್ ಆರ್.ಅರಳಿಕಟ್ಟಿ, ನರಸಪ್ಪ ಬಿ.ತುಕ್ಕಪ್ಪನವರ, ಶಿವಾಜಿರಾವ ಪಿ.ಪಾವನ, ಶಿವಾಜಿ ವಾಯ್.ಗ್ವಾರಿ, ಅಣ್ಣಪ್ಪ ಎಸ್.ಹೆಬ್ಬಳ್ಳಿ, ಮುದಕಪ್ಪ ಬಿ.ತುಕ್ಕಪ್ಪನವರ, ಮಂಜು ಎನ್.ಮಾನೆ, ವೀರಣ್ಣ ಎನ್.ಪವಾರ ಸೇರಿದಂತೆ ಮಹಿಳಾ ಮಂಡಳದವರು, ಯುವಕ ಸಂಘದ ಸದಸ್ಯರು ಮತ್ತು ಸಮಾಜ ಬಾಂಧವರು ಉಪಸ್ಥಿತರಿದ್ದರು.

## ಮಾದಕ ವಸ್ತುಗಳ ತಡೆಗೆ ಜಾಗೃತಿ ಅಗತ್ಯ




■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಾದಕ ವಸ್ತುಗಳಿಂದ ಯುವ ಪೀಳಿಗೆಯು ತಮ್ಮ ಅಮೂಲ್ಯವಾದ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದು, ಯುವ ಪೀಳಿಗೆಯಲ್ಲಿ ಮಾದಕ ವಸ್ತುಗಳ ಬಳಿಕೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವ ಹಾಗೂ ಮಾದಕ ದ್ರವ್ಯ ವ್ಯಸನದಿಂದ ಮುಕ್ತಗೊಳಿಸುವಲ್ಲಿ ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ ಯುವಕರಲ್ಲಿ ಜಾಗೃತಿ ಮುಖ್ಯವಾಗಿದೆ ಎಂದು ಮುಳಗುಂದ ಠಾಣಾ ಸಿಪಿಐ ಸಂಗಮೇಶ ಶಿವಯೋಗಿ ಹೇಳಿದರು.

ಅವರು ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯದಲ್ಲಿ ಗದಗ ಜಿಲ್ಲಾ ಪೊಲೀಸ್ ಇಲಾಖೆ, ಮುಳಗುಂದ ಪೊಲೀಸ್ ಠಾಣೆ ಇವರ ಸಂಯುಕ್ತ ಆಶ್ರಯದಲ್ಲಿ ಶಾಲಾ ಮಕ್ಕಳಿಗೆ ಅಂತಾರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಜಾಗೃತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಯುವ ಪೀಳಿಗೆ ಜಾಗೃತಗೊಂಡಾಗ ಮಾತ್ರ ಮಾದಕ ವಸ್ತುಗಳ ಸೇವನೆ/ಮಾರಾಟಕ್ಕೆ ಕಡಿವಾಣ ಹಾಕಲು ಸಾಧ್ಯವಿದೆ. ಮಾದಕ ವಸ್ತುಗಳ ಕಡಿವಾಣಕ್ಕೆ ಪೊಲೀಸ್ ಇಲಾಖೆಯಿಂದ ಎಲ್ಲಾ ರೀತಿಯಿಂದ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.

ಪ್ರಾಚಾರ್ಯ ಎ.ಎಂ. ಅಂಗಡಿ, ಇ.ಎಂ. ಗುಳೆದಗುಡ್ಡ, ಎಂ.ಎಂ. ಅದರಗುಂಚಿ, ಪ್ರಕಾಶ ಮದ್ದಿನ, ಬಸವರಾಜ ಬಡ್ನಿ, ಮುಳಗುಂದ ಪೊಲೀಸ್ ಠಾಣಾ ಸಿಬ್ಬಂದಿಗಳಾದ ಎಎಸ್‌ಐ ಬಿ.ಎಂ. ಕುರ್ತಕೋಟಿ, ಎಚ್.ಬಿ. ಗುಡ್ಡಣ್ಣವರ, ವಿ.ವಾಯ್. ಪೂಜಾರ, ನಾಗರಾಜ ಸೌಳಭಾವಿ, ಸಂತೋಷ ಹಿರೇಮಠ ಇದ್ದರು.

## ಎನ್‌ಎಸ್‌ಎಸ್ ವ್ಯಕ್ತಿತ್ವ ವಿಕಸನಕ್ಕೆ ಸಹಕಾರಿ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀಮತಿ ಕಮಲಾ ಮತ್ತು ವೆಂಕಪ್ಪ ಎಂ.ಅಗಡಿ ಅಭಿಯಾಂತ್ರಿಕ ಮತ್ತು ತಾಂತ್ರಿಕ ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕದಿಂದ ಸಮೀಪದ ಹೂವಿನಶಿಗ್ಲಿ ಗುರುಕುಲ ಆಶ್ರಮದ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಿದರು.

ಈ ವೇಳೆ ಶ್ರೀಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಮಾತನಾಡಿ, ಶಿಕ್ಷಣ, ಅನ್ನ, ಆಶ್ರಯ ತ್ರಿವಿಧ ಸೇವೆ ಮಾಡುತ್ತಿರುವ ಮಠ–ಮಾನ್ಯಗಳಿಗೆ ಭಕ್ತರ, ಸೇವಾ ಸಂಸ್ಥೆಗಳ ಸಹಾಯ–ಸಹಕಾರ ಅಗತ್ಯವಾಗಿದೆ. ನಿಟ್ಟಿನಲ್ಲಿ ಶಿಕ್ಷಣ, ಆರೋಗ್ಯ, ಧಾರ್ಮಿಕ, ಸಾಮಾಜಿಕ ಸೇವೆ ಮಾಡುತ್ತಿರುವ ಲಕ್ಷ್ಮೇಶ್ವರದ ಅಗಡಿ ಮನೆತನದ ಕಾರ್ಯ ಶ್ಲಾಘನೀಯ. ಪ್ರತಿ ವರ್ಷ ಅಗಡಿ ಇಂಜಿನೀಯರಿಂಗ್ ಕಾಲೇಜಿನ ಎನ್‌ಎಸ್‌ಎಸ್ ಘಟಕದಿಂದ ಮಠದ ಗುರುಕುಲದ ಬಡ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳನ್ನು ನೀಡುವ ಮೂಲಕ ಮಕ್ಕಳ ಶಿಕ್ಷಣಕ್ಕೆ ನೆರವಾಗುತ್ತಿದ್ದಾರೆ. ಎನ್‌ಎಸ್‌ಎಸ್ ಪರಿಪೂರ್ಣ ವ್ಯಕ್ತಿತ್ವ ವಿಕಸನಕ್ಕೆ ಸಹಕಾರಿಯಾಗಿದೆ ಎಂದರು.

ಕಾರ್ಯಕ್ರಮ ಅಧ್ಯಕ್ಷತೆಯನ್ನು ಮಹಾವಿದ್ಯಾಲಯದ ಪ್ರಾಚಾರ್ಯ ಪರಶುರಾಮ ಬಾರಕಿ ವಹಿಸಿದ್ದರು. ಈ ಸಂದರ್ಭದಲ್ಲಿ ಡಾ. ಎನ್. ಹಯವದನ, ಎನ್‌ಎಸ್‌ಎಸ್ ಅಧಿಕಾರಿ ಪ್ರೊ. ಸೊಮಶೇಖರ ಕೆರಿಮನಿ, ಡಾ. ಆರ್.ಎಂ. ಪಾಟೀಲ, ಡಾ. ಸಪ್ನಾ ಗೌಡರ, ಡಾ. ಗಿರೀಶ ಯತ್ನಳ್ಳಿ, ಪ್ರೊ. ಎಸ್.ಎಫ್. ಕೊಡ್ಲಿ ಸೇರಿದಂತೆ ಉಪನ್ಯಾಸಕರು, ವಿದ್ಯಾರ್ಥಿಗಳು ಇದ್ದರು. ಪ್ರಶಾಂತಗೌಡ ಪಾಟೀಲ, ಆರ್.ವಿ. ಬಡಿಗೇರ, ಹೆಚ್.ಎನ್. ಶರಸೂರಿ ನಿರ್ವಹಿಸಿದರು.



ಲಕ್ಷ್ಮೇಶ್ವರ ತಾಲೂಕಿನ ಕುಂದ್ರಳ್ಳಿ ಗ್ರಾಮದಲ್ಲಿ ಜೂನ್ 11ರಂದು ಸುರಿದ ಅಪಾರ ಮಳೆಯಿಂದಾಗಿ ಹಾನಿಯಾದ ಪ್ರದೇಶಕ್ಕೆ ಬುಧವಾರ ಶಾಸಕ ಡಾ. ಚಂದ್ರು ಲಮಾಣಿ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲಿಸಿದರು. ಈ ವೇಳೆ ರೈತರ ಮತ್ತು ಗ್ರಾಮಸ್ಥರ ಅಳಲು ಆಲಿಸಿದ ಶಾಸಕರು, ಹಾನಿಗೊಳಗಾದ ರೈತರಿಗೆ ಪರಿಹಾರ ಕಲ್ಪಿಸುವುದು ಮತ್ತು ಮಳೆಯಿಂದ ಉಂಟಾಗಬಹುದಾದ ಸಮಸ್ಯೆಗಳಿಗೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕೆಂದು ತಹಸೀಲ್ದಾರ ವಾಸುದೇವ ಸ್ವಾಮಿ ಅವರಿಗೆ ಸೂಚಿಸಿದರು. ತಾ.ಪಂ ಇಓ ಕೃಷ್ಣಪ್ಪ ಧರ್ಮರ ಸೇರಿದಂತೆ ಕಂದಾಯ, ಕೃಷಿ, ಪೊಲೀಸ್ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಮತ್ತು ರೈತರಿದ್ದರು.

## ಬಿಜೆಪಿ ಮಂಡಲದಿಂದ ವನಮಹೋತ್ಸವ



■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಹೊಳೆ ಆಲೂರ ಮಂಡಲದಿಂದ ಬೆಳವಣಕಿ ಗ್ರಾಮದಲ್ಲಿ ವನಮಹೋತ್ಸವ ಆಚರಿಸಲಾಯಿತು.

ಬೆಳವಣಕಿ ಗ್ರಾಮದ ಸರಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಸಸಿ ನೆಡುವದರ ಮೂಲಕ ವನಮಹೋತ್ಸವಕ್ಕೆ ಮಂಡಲ ಅಧ್ಯಕ್ಷರಾದ ಸೋಮಲಿಂಗಪ್ಪ ಬಿ ಚರೇದ ಇವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ

ಮಂಡಲದ ಪ್ರಧಾನ ಕಾರ್ಯದರ್ಶಿಗಳಾದ ನೀಲಪ್ಪಗೌಡ ದಾನಪ್ಪಗೌಡ, ಎಸ್ಸಿ ಮೋರ್ಚಾದ ಅಧ್ಯಕ್ಷರಾದ ಚಂದ್ರಶೇಖರ ಮಾದರ, ಎಸ್ಟಿ ಮೋರ್ಚಾ ಅಧ್ಯಕ್ಷರಾದ ಮಂಜುನಾಥ ಚುಳಕಿ, ಮುದಿಯಪ್ಪ ದಾನಿ, ಸುಭಾಸ್ ಹೊಸಂಗಡಿ, ಶಿವಪ್ಪ ಹಾಲಭಾವಿ, ಮಹೇಶ ಗುದ್ಲಿ, ಇಸ್ಮಾಯಿಲ್ ಗದಗ, ಬಸವರಾಜ ಗುದ್ಲಿ, ಈರಪ್ಪ ಮಡಿವಾಳರ, ಡಾ. ಆರ್ ಎಸ್ ಕೊಣ್ಣೂರ ಹಾಗೂ ಪ್ರಾಥಮಿಕ ಅರೋಗ್ಯ ಕೇಂದ್ರದ ಸಿಬ್ಬಂದಿಗಳು ಇದ್ದರು.

### ವಿಶ್ವಕರ್ಮ ಮಹಾ ಒಕ್ಕೂಟದ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ವಿಜಯಕುಮಾರ ಪತ್ತಾರ

# ವಿಶ್ವಕರ್ಮ ಮಹಾ ಒಕ್ಕೂಟ ಪಕ್ಷಾತೀತ ಸಂಘಟನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಶೈಕ್ಷಣಿಕವಾಗಿ, ಆರ್ಥಿಕವಾಗಿ, ರಾಜಕೀಯವಾಗಿ ಹಿಂದುಳಿದ ವಿಶ್ವಕರ್ಮ ಸಮಾಜವನ್ನು ಮುಖ್ಯವಾಹಿನಿಗೆ ತರುವಲ್ಲಿ ಹಾಗೂ ಸಮಾಜವನ್ನು ಕ್ರಿಯಾತ್ಮಕವಾಗಿ ಸಂಘಟಿಸುವುದರೊಂದಿಗೆ ಪಕ್ಷಾತೀತ ಸಂಘಟನೆಯಾಗಿ ವಿಶ್ವಕರ್ಮ ಮಹಾ ಒಕ್ಕೂಟ ಸಮಾಜಸೇವೆ ಸಲ್ಲಿಸಲಿದೆ ಎಂದು ವಿಶ್ವಕರ್ಮ ಮಹಾ ಒಕ್ಕೂಟದ ರಾಜ್ಯಾಧ್ಯಕ್ಷ ವಿಜಯಕುಮಾರ ಪತ್ತಾರ ಹೇಳಿದರು.

ಅವರು ನಗರದ ವಿಜಯನಗರ ಬಡಾವಣೆಯಲ್ಲಿರುವ ವಿಶ್ವಕರ್ಮ ಸಮುದಾಯ ಭವನದಲ್ಲಿ ವಿಶ್ವಕರ್ಮ ಮಹಾ ಒಕ್ಕೂಟದ ಗದಗ ಜಿಲ್ಲಾ ಘಟಕದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ, ನೂತನ ಪದಾಧಿಕಾರಿಗಳಿಗೆ ಪ್ರಮಾಣ ವಚನ ಬೋಧಿಸಿ ಮಾತನಾಡುತ್ತಿದ್ದರು. ಸರ್ಕಾರದಿಂದ ಸಿಗಬೇಕಾದ ಅನುದಾನ ತಂದು ವಿಶ್ವಕರ್ಮ ಸಮಾಜದ ಶಕ್ತಿಕೇಂದ್ರಗಳಾದ ಶಿರಸಂಗಿ, ತಿಂಥಣಿ, ವರವಿ, ಲಿಂಗನಬಂಡಿ ಸೇರಿದಂತೆ ಧಾರ್ಮಿಕ ಕ್ಷೇತ್ರಗಳನ್ನು ಅಭಿವೃದ್ಧಿಪಡಿಸುವ ಹಿನ್ನೆಲೆಯಲ್ಲಿ ಸ್ಥಳೀಯ ಸಂಘಟನೆಗಳೊಂದಿಗೆ ಕೈಜೋಡಿಸಿ ಶ್ರಮಿಸಲಾಗುವುದು. ತೊಂದರೆ, ಅನ್ಯಾಯಕ್ಕೆ ಒಳಗಾದ ಸಮಾಜ ಬಾಂಧವರ ಬೆನ್ನೆಲುಬಾಗಿಯೂ ಸಂಘಟನೆ ಕೆಲಸ ಮಾಡಲಿದೆ ಎಂದು ಹೇಳಿದರು.

ವಿಶ್ವಕರ್ಮ ಮಹಾ ಒಕ್ಕೂಟದ ಉತ್ತರ ಕರ್ನಾಟಕ ಪ್ರಾದೇಶಿಕ ಅಧ್ಯಕ್ಷ ನಿರಂಜನ ಬಡಿಗೇರ ಮಾತನಾಡಿ, ಗದಗ ಜಿಲ್ಲಾ ಸಂಘಟನೆ ಸರ್ವರನ್ನೂ ವಿಶ್ವಾಸಕ್ಕೆ ತಗೆದುಕೊಂಡು ಮಾದರಿ ಸಂಘಟನೆಯಾಗಿ ಹೊರಹೊಮ್ಮಲಿ ಎಂದು ಶುಭಕೋರಿದರು.

ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಡಿ. ಕಡ್ಲಿಕೊಪ್ಪ, ವರವಿ ಶ್ರೀಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಅಧ್ಯಕ್ಷ ಮೋಹನ ನರಗುಂದ, ಕಲಬುರ್ಗಿ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಚಂದ್ರಶೇಖರ ಪತ್ತಾರ, ಕುರ್ತಕೋಟಿ ವಿಶ್ವಕರ್ಮ ಕುಶಲಕರ್ಮಿ ಕೌಶಲ್ಯಾಭಿವೃದ್ಧಿ ಸಂಘದ ಅಧ್ಯಕ್ಷ ಮುತ್ತಣ್ಣ ಬಡಿಗೇರ ಮಾತನಾಡಿದರು. ವಿಶ್ವಕರ್ಮ ಮಹಾ ಒಕ್ಕೂಟದ ನೂತನ ಜಿಲ್ಲಾ ಅಧ್ಯಕ್ಷ ನಾಗರಾಜ ಕಮ್ಮಾರ, ಮಹಿಳಾ ಘಟಕದ ನೂತನ ಜಿಲ್ಲಾ ಅಧ್ಯಕ್ಷರಾದ ಅನ್ನಪೂರ್ಣ ಬಡಿಗೇರ ಸೇರಿದಂತೆ ಪದಾಧಿಕಾರಿಗಳಿಗೆ ರಾಜ್ಯಾಧ್ಯಕ್ಷ ವಿಜಯಕುಮಾರ ಪತ್ತಾರ ಪ್ರಮಾಣ ವಚನ ಬೋಧಿಸಿದರು.

ವೇದಿಕೆಯಲ್ಲಿ ಗದಗ ಜಿಲ್ಲಾ ವಿಶ್ವಕರ್ಮ ಮಹಾಸಭಾ ಜಿಲ್ಲಾ ಅಧ್ಯಕ್ಷ ದೇವೇಂದ್ರಪ್ಪ ಬಡಿಗೇರ, ಕೆಪಿಸಿಸಿ ವಿಶ್ವಕರ್ಮ ಕುಶಲಕರ್ಮಿಗಳ ವಿಭಾಗದ ಜಿಲ್ಲಾಧ್ಯಕ್ಷ ಮೌನೇಶ್ವರ ಅಕ್ಕಸಾಲಿಗ, ವಿಶ್ವಕರ್ಮ ಕಟ್ಟಡ ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷ ವೀರಣ್ಣ ಹಲವಾಗಲಿ, ಬೆಟಗೇರಿ ಶ್ರೀಕಾಳಿಕಾದೇವಿ ದೇವಸ್ಥಾನ ಟ್ರಸ್ಟ್ ಕಮಿಟಿ ಅಧ್ಯಕ್ಷ ಶ್ರೀಧರ ಕೊಣ್ಣೂರ, ಗದಗ ಜಿಲ್ಲಾ ಸಾಹಿತ್ಯ ಸಾಂಸ್ಕೃತಿಕ ಕಲಾ ಸಂಘದ ಅಧ್ಯಕ್ಷ ಮೌನೇಶ ಸಿ. ಬಡಿಗೇರ (ನರೇಗಲ್ಲ), ಗದಗ ಜಿಲ್ಲಾ ವಿಶ್ವಕರ್ಮ ಯುವ ಪರಿಷತ್ ಅಧ್ಯಕ್ಷ ಮಹೇಶ ಕಮ್ಮಾರ, ಎಸ್.ಎನ್. ಬಡಿಗೇರ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ವಿಶ್ವಕರ್ಮ ಮಹಾ ಒಕ್ಕೂಟದ ನೂತನ ಜಿಲ್ಲಾ ಸಂಚಾಲಕ ವಿಶ್ವನಾಥ ಯ. ಕಮ್ಮಾರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

> ಹಿರಿಯ ಸಾಹಿತಿ ಡಿ.ವಿ. ಬಡಿಗೇರ ಮಾತನಾಡಿ, ಇತ್ತೀಚೆಗೆ ಸಂಘಟನೆಗಳ ಸಂಖ್ಯೆ ಹೆಚ್ಚುತ್ತಿದೆ. ರಾಜ್ಯಮಟ್ಟದಲ್ಲಿ ಹಲ ಸಂಘಟನೆಗಳು ಜಿಲ್ಲಾ ಮಟ್ಟದ ಸಂಘಟನೆಗಳನ್ನು ಏಣಿಯಾಗಿ ಬಳಕೆ ಮಾಡಿಕೊಂಡು ಕೈಬಿಡುವ ಕೆಲಸವಾಗಿದೆ, ಹಾಗಾಗಬಾರದು. ಸಂಘಟನೆಗಳು ಸಮಾಜಮುಖಿಯಾಗಿ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.

# ಮುಸ್ಲಿಂ ಯುವಕರ ಮೇಲೆ ಹಲ್ಲೆ, ಜೈ ಶ್ರೀರಾಮ್ ಹೇಳುವಂತೆ ಒತ್ತಾಯ: ಆರೋಪ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರಿನ ಸಂಪಿಗೆಹಳ್ಳಿ ಪ್ರದೇಶದಲ್ಲಿ ಇಬ್ಬರು ಮುಸ್ಲಿಂ ಯುವಕರ ಮೇಲೆ ಹಲ್ಲೆ ನಡೆಸಿದ ಗುಂಪೊಂದು, 'ಜೈಶ್ರೀರಾಮ್' ಹೇಳುವಂತೆ ಒತ್ತಾಯಿಸಿರುವ ಆರೋಪ ಕೇಳಿ ಬಂದಿದೆ.

ಉತ್ತರ ಬೆಂಗಳೂರಿನ ಸಂಪಿಗೆಹಳ್ಳಿ ಪ್ರದೇಶದಲ್ಲಿ ಜೂನ್ 22ರಂದು ಭಾನುವಾರ ಘಟನೆ ನಡೆದಿದೆ. ಸುಮಾರು ಏಳು ಮಂದಿಯ ಗುಂಪು ಹಲ್ಲೆ ನಡೆಸಿದೆ. ಇದರಿಂದ ಹೆಗ್ಡೆ ನಗರದ ಮೆಕ್ಯಾನಿಕ್ ವಸೀಮ್ ಅಹ್ಮದ್ ಎಂಬಾತ ತೀವ್ರವಾಗಿ ಗಾಯಗೊಂಡಿದ್ದಾರೆ ಎಂದು ವರದಿ ಮಾಡಿದೆ.

ವಸೀಮ್ ಜೊತೆಗಿದ್ದ ಸಹ ಮೆಕ್ಯಾನಿಕ್ ಝುಮೀರ್ ನೀಡಿದ ದೂರಿನ ಮೇರೆಗೆ ಎಫ್‌ಐಆರ್ ದಾಖಲಾಗಿದೆ. ಇಬ್ಬರು ಸಂಪಿಗೆಹಳ್ಳಿ ಮುಖ್ಯ ರಸ್ತೆ ಮೂಲಕ ಚೊಕ್ಕನಹಳ್ಳಿಗೆ ಪ್ರಯಾಣಿಸುತ್ತಿದ್ದಾಗ ಸಂಜೆ 4.30 ರಿಂದ 5.30 ರ ನಡುವೆ ಹಲ್ಲೆ ನಡೆದಿದೆ ಎಂದು ಝುಮೀರ್ ತನ್ನ ದೂರಿನಲ್ಲಿ ಆರೋಪಿಸಿದ್ದಾರೆ.

"ನಾವು ಆಟೋ ನಿಲ್ಲಿಸಿದ್ದಾಗ ಅಲ್ಲಿಗೆ ಬಂದ ಐದಾರು ಮಂದಿಯ ಗುಂಪು, ನೀವೇಕೆ ಇಲ್ಲಿದ್ದೀರಿ? ಎಂದು ಪ್ರಶ್ನಿಸಿದ್ದಾರೆ. ಈ ವೇಳೆ ವಸೀಮ್ ಅವರಿಗೆ ಮರುಪ್ರಶ್ನೆ ಹಾಕಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka